ಸಂಪುಟ 01 । ಸಂಚಿಕೆ 125 । ಸೋಮವಾರ 23 ಮಾರ್ಚ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಅಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ವಿಶ್ವ ಹವಾಮಾನ ದಿನ**

ಸಮಾಜದ ಸುರಕ್ಷತೆ ಮತ್ತು ಯೋಗಕ್ಷೇಮಕ್ಕಾಗಿ ಹವಾಮಾನ ಮತ್ತು ಹವಾಮಾನದ ಕಡೆಗೆ ಗಮನ ಸೆಳೆಯಲು ಪ್ರತಿ ವರ್ಷ ಮಾರ್ಚ್ 23 ರಂದು ವಿಶ್ವ ಹವಾಮಾನ ದಿನವನ್ನು ಆಚರಿಸಲಾಗುತ್ತದೆ. ಮಾರ್ಚ್ 23, 1950 ರಂದು, ವಿಶ್ವ ಹವಾಮಾನ ಸಂಸ್ಥೆ ಜಾರಿಗೆ ಬಂದಿತು. 2023 ರ ವಿಶ್ವ ಹವಾಮಾನ ದಿನದ ವಿಷಯ "ಮುಂಚಿನ ಎಚ್ಚರಿಕೆ ಮತ್ತು ಆರಂಭಿಕ ಕ್ರಮ. ವಿಪತ್ತು ಅಪಾಯ ಕಡಿತಕ್ಕಾಗಿ ಜಲ ಹವಾಮಾನ ಮತ್ತು ಹವಾಮಾನ ಮಾಹಿತಿ."

**2) ಹುತಾತ್ಮರ ದಿನ**

ಭಾರತದಲ್ಲಿ ಹಲವಾರು ದಿನಾಂಕಗಳಂದು ಹುತಾತ್ಮರ ದಿನ ಅಥ–'ವಾ ಶಹೀದ್ ದಿವಸ್ ಆಚರಿಸಲಾಗುತ್ತದೆ. ಮಾರ್ಚ್ 23 ಅನ್ನು ಮೂವರು ಧೈರ್ಯಶಾಲಿ ಸ್ವಾತಂತ್ರ್ಯ ಹೋರಾಟಗಾರರಾದ ಭಗತ್ ಸಿಂಗ್, ಶಿವರಾಮ್ ರಾಜಗುರು ಮತ್ತು ಸುಖದೇವ್ ಥಾಪರ್ ಅವರನ್ನು ಬ್ರಿಟಿಷರು ಗಲ್ಲಿಗೇರಿಸಿದ ದಿನವೆಂದು ಸ್ಮರಿಸಲಾಗುತ್ತದೆ. ಅಲ್ಲದೆ, ಜನವರಿ 30 ಅನ್ನು ಮಹಾತ್ಮ ಗಾಂಧಿಯವರ ಸ್ಮರಣಾರ್ಥ ಹುತಾತ್ಮರ ದಿನ ಅಥವಾ ಶಹೀದ್ ದಿವಸ್ ಎಂದು ಆಚರಿಸಲಾಗುತ್ತದೆ.

## ಸುಭಾಷಿತ

ಹೂವು ಅರಳಿದಾಗ ನೋಡುವ ಜನರು ಬಹಳ, ಅದೇ ಹೂ ಬಾಡಿದ ಮೇಲೆ, ತುಳಿಯುವವರು ಬಹಳ ಜನ. "ಅದೇ ರೀತಿ ಜೀವನ" ನಗುವ ಮುಖಕ್ಕೆ ಇರುವ ಬೆಲೆ, ಅಳುವ ಮುಖಕ್ಕೆ ಇರಲ್ಲ. ಇದನ್ನು ಅರಿತು ನಡೆದರೆ ಅದೇ... "ಸುಂದರ ಬದುಕು"


ಡಾ॥ ಶ್ರೀ ಗುರುಬಸವ ಮಹಾ ಸ್ವಾಮಿಗಳು




# ದಾವಣಗೆರೆ ದಕ್ಷಿಣ ಟಿಕೆಟ್ ಫೈಟ್ :ಜಮೀರ್ ಬ್ಲಾಕ್‌ಮೆಲ್‌ಗೆ ಕ್ಯಾರೇ ಎನ್ನದ ಹೈಕಮಾಂಡ್

**ಬೆಂಗಳೂರು:** ವಿಧಾನಸಭೆ ಉಪಚುನಾವಣೆಯ ಟಿಕೆಟ್ ಹಂಚಿಕೆಯ ಸಂಬಂಧಪಟ್ಟಂತೆ ವಸತಿ ಸಚಿವ ಜಮೀರ್ ಅಹಮದ್‌ಖಾನ್‌ಗೆ ತೀವ್ರ ಹಿನ್ನಡೆಯಾಗಿದ್ದು, ಸಂಪುಟದಲ್ಲಿ ಉಳಿಯಬೇಕೆ? ಅಥವಾ ನಿರ್ಗಮಿಸ ಬೇಕೆ ಎಂಬ ಸಂದಿಗ್ಧತೆ ನಿರ್ಮಾಣವಾಗಿದೆ.

ಅಲ್ಪಸಂಖ್ಯಾತ ಸಮುದಾಯದ ಅಭ್ಯರ್ಥಿಗೆ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಲು ಅವಕಾಶ ನೀಡದೇ ಇದ್ದರೆ ತಾವು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಜಮೀರ್ ಅಹಮದ್‌ಖಾನ್ ಬ್ಲಾಕ್‌ಮೆಲ್ ಮಾಡಿದ್ದರು. ಆದರೆ ಅದಕ್ಕೆ ತಲೆಕೆಡಿಸಿಕೊಳ್ಳದೆ ಹೈಕಮಾಂಡ್ ಶ್ಯಾಮನೂರು ಶಿವಶಂಕರಪ್ಪ ಕುಟುಂಬಕ್ಕೆ ಮಣೆ ಹಾಕಿದೆ. ವಿಧಾನಸಭೆಯ ಉಪಚುನಾವಣೆಗೆ ಅಭ್ಯರ್ಥಿಗಳ ಆಯ್ಕೆ ಇಂದು ಅಧಿಕೃತವಾಗಿ ಘೋಷಣೆಯಾಗಿದ್ದು, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಶ್ಯಾಮನೂರು ಕುಟುಂಬದ ಮೂರನೇ ತಲೆಮಾರು ಹಾಗೂ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಪುತ್ರ ಸಮರ್ಥ್ ಅವ–ರಿಗೆ ಟಿಕೆಟ್ ದೊರೆತ್ತಿದೆ. ಜೊತೆಗೆ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಮಾಜಿ ಸಚಿವ ದಿ.ಎಚ್.ವೈ.ಮೇಟಿ ಅವರ



ಪುತ್ರ ಉಮೇಶ್ ಮೇಟಿ ಕಣಕ್ಕಿಳಿಯುತ್ತಿದ್ದಾರೆ.

ಅಲ್ಪಸಂಖ್ಯಾತ ಅಭ್ಯರ್ಥಿಗೆ ದಾವಣಗೆರೆ ದಕ್ಷಿಣ ಕ್ರೇತ್ರದಲ್ಲಿ ಸ್ಪರ್ಧಿಸಲು ಟಿಕೆಟ್ ಕೊಡಿಸಬೇಕೆಂಬ ಹಿನ್ನೆಲೆಯಲ್ಲಿ ಜಮೀರ್ ಅಹಮದ್‌ಖಾನ್ ಅನುಸ–ರಿಸಿದ ಒತ್ತಡದ ತಂತ್ರಗಳು ವಿಫಲವಾಗಿವೆ. ಕಾಂಗ್ರೆಸ್‌ನಲ್ಲಿ ಜಮೀರ್ ಅಹಮದ್ ಖಾನ್ ಅಲ್ಪಸಂಖ್ಯಾತ ಸಮುದಾಯದ ಪ್ರಭಾವಿ ನಾಯಕರಾಗಿ ಗುರುತಿಸಿಕೊಂಡಿದ್ದಾರೆ. ಒಂದು ಕಾಲದಲ್ಲಿ ಜಾಫರ್ ಶರೀಫ್, ರೋಷನ್‌ಬೇಗ್ ಅವರುಗಳು ಕಾಂಗ್ರೆಸ್‌ನ ಮುಂಚೂಣಿ ನಾಯಕರಾಗಿದ್ದು, ಸಿದ್ದರಾಮಯ್ಯ ಅವರ ಬೆಂಬಲದೊಂದಿಗೆ ಅವರನ್ನೆಲ್ಲಾ ನೇಪಥ–'ಕ್ಕೆ ಸರಿಸಿದ ಜಮೀರ್ ಅಹಮದ್‌ಖಾನ್, ತಾವು ಅಲ್ಪಸಂಖ್ಯಾತ ಸಮುದಾಯದಿಂದ ಕಾಂಗ್ರೆಸ್‌ನಲ್ಲಿ ಅಗ್ರಗಣ್ಯ ನಾಯಕರೆಂದು ಬಿಂಬಿಸಿಕೊಂಡಿದ್ದರು.

ಸದಾಕಾಲ ಸಿದ್ದರಾಮಯ್ಯ ಅವರ ಪರವಾಗಿ ಬ್ಯಾಟಿಂಗ್ ಮಾಡುವ ಮೂಲಕ ಡಿ.ಕೆ.ಶಿವಕುಮಾರ್ ಅವರ ಕೆಂಗಣ್ಣಿಗೆ ಗು–ರಿಯಾಗಿದ್ದರು. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಜಮೀರ್ ಅಹಮದ್‌ಖಾನ್ ಅವರ ಕಟ್ಟಾ ಬೆಂಬಲಿಗರಾಗಿದ್ದ ಆಗಿನ ಹಾಲಿ ಕಾಂಗ್ರೆಸ್‌ನ ಶಾಸಕ ಅಖಂಡ ಶ್ರೀನಿವಾಸ್ ಅವರಿಗೆ ಟಿಕೆಟ್ ನೀಡದೆ ಡಿ.ಕೆ.ಶಿವಕುಮಾರ್ ಚೆಕ್‌ಮೆಟ್ ಇಟ್ಟಿದ್ದರು. ಅನಂತರ ಕೂಡ ಜಮೀರ್‌ಅಹಮದ್ ಖಾನ್ ಪದೇಪದೇ ಸಿದ್ದರಾಮಯ್ಯ ಅವರ ಪರವಾಗಿ ವಕಾಲತು ವಹಿಸುವ ಮೂಲಕ ಅಧಿಕಾರ ಹಂಚಿಕೆಯ ವಿಚಾರವಾಗಿ ಹೈಕಮಾಂಡ್ ಆದೇಶಕ್ಕೆ ವಿರುದ್ಧವಾಗಿ ಗೊಂದಲ ಮೂಡಿಸುವ ಪ್ರಯತ್ನ ಮಾಡುತ್ತಿದ್ದರು.

ಅಲ್ಪಸಂಖ್ಯಾತ ನಾಯಕರೊಂದಿಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರನ್ನು ಭೇಟಿ ಮಾಡುವ ಮೂಲಕ ಪ್ರತ್ಯೇಕವಾಗಿ ತಮದೇ ಆದ ತಂತ್ರಗಾ–ರಿಕೆಯನ್ನು ಅನುಸರಿಸುತ್ತಿದ್ದರು. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮಾಯಿ ಅವರು ಸಂಸತ್ ಸದಸ್ಯರಾದ ಬಳಿಕ ತೆರವಾದ ಶಿಗ್ಗಾಂವಿ ಕ್ಷೇತ್ರಕ್ಕೆ ನಡೆದ ಉಪಚುನಾವಣೆಯಲ್ಲಿ ಅಲ್ಪಸಂಖ್ಯಾತ ಅಭ್ಯರ್ಥಿಗೆ? ಟಿಕೆಟ್ ಕೊಡಿಸುವ ಹಾಗೂ ಅವರನ್ನು ಗೆಲ್ಲಿಸಿಕೊಂಡು ಬರುವಲ್ಲಿ ಜಮೀರ್ ಯಶಸ್ವಿಯಾಗಿದ್ದರು. ಅನಂತರ ಮತ್ತೆ ಒಂದಷ್ಟು ದಿನ ಮುಂಚೂಣಿಯಲ್ಲಿದ್ದ ಜಮೀರ್, ಸಿದ್ದರಾಮಯ್ಯ 5 ವರ್ಷ

4ನೇ ಪುಟಕ್ಕೆ

# ಕಸಾಪ ವತಿಯಿಂದ ಯುಗಾದಿ ಪ್ರಯುಕ್ತ ರಂಗೋಲಿ ಸ್ಪರ್ಧೆ



**ನೈಜ್ಯ ದೇಸೆ ನ್ಯೂಸ್**

**ವಿಜಯಪುರ:** ಯುಗಾದಿ ಹಬ್ಬದ ಅಂಗವಾಗಿ ಪಟ್ಟಣದ ಕನ್ನಡ ಸಾಹಿತ್ಯ ಪರಿಷತ್ತಿನ (ಕಸಾಪ) ವತಿಯಿಂದ 8ನೇ ವಾರ್ಡಿನ ಒಕ್ಕಲಿಗರ ಬೀದಿ ಹಾಗೂ ರಾಮಮಂದಿರ ಬೀದಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ರಂಗೋಲಿ ಸ್ಪರ್ಧೆಯು ಸಂಭ್ರಮದಿಂದ ಜರುಗಿತು. ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ಹಾಗೂ ಪ್ರಮಾಣ ಪತ್ರಗಳನ್ನು ವಿತರಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಕಸಾಪ ಜಿಲ್ಲಾಧ್ಯಕ್ಷ ಕೃಷ್ಣಪ್ಪ ಅವರು, "ರಂಗೋಲಿಯು ನಮ್ಮ ಶ್ರೀಮಂತ ಸಂಸ್ಕೃತಿಯ ಸಂಕೇತವಾಗಿದೆ. ಒಂದು ಮನೆಯ ರಂಗೋಲಿಯನ್ನು ನೋಡಿ ಆ ಮನೆಯ ಸಂಪ್ರದಾಯ ಮತ್ತು ಹಿನ್ನೆಲೆಯನ್ನು ತಿಳಿಯಬಹುದು. ರಂಗೋಲಿ ಬಿಡಿಸುವುದು ಕೇವಲ ಕಲೆಯಲ್ಲ, ಅದು ಮನಸ್ಸಿಗೆ ಸಂತೋಷ ನೀಡುವ ಜೊತೆಗೆ ಆರೋಗ್ಯವನ್ನೂ ವೃದ್ಧಿಸುತ್ತದೆ," ಎಂದು ತಿಳಿಸಿದರು. ತಾಲ್ಲೂಕು ಕಸಾಪ ಅಧ್ಯಕ್ಷ ಆರ್.ಕೆ. ನಂಜೇಗೌಡ ಮಾತನಾಡಿ, "ನಮ್ಮ ಹಿರಿಯರು ಹಾಕಿಕೊಟ್ಟ ಸಾಂಸ್ಕೃತಿಕ ಚಟುವಟಿ–ಕೆಗಳನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸಲು ಇಂತಹ ಸ್ಪರ್ಧೆಗಳ ಆಯೋಜನೆ ಅತ್ಯಗತ್ಯ," ಎಂದು ಅಭಿಪ್ರಾಯಪಟ್ಟರು.

ಸ್ಪರ್ಧೆಯಲ್ಲಿ ಅತ್ಯುತ್ತಮ ರಂಗೋಲಿ ಬಿಡಿಸಿದ ಸಾವಿತಮ್ಮ (ಪ್ರಥ–'ಮ), ಮಂಗಳಮ್ಮ (ದ್ವಿತೀಯ) ಹಾಗೂ ಲಕ್ಷ್ಮೀ (ತೃತೀಯ) ಬಹುಮಾನ ಪಡೆದರು. ಉಳಿದಂತೆ ಎಂಟು ಮಂದಿಗೆ ಸಮಾಧಾನಕರ ಬಹುಮಾನ ಹಾಗೂ ಪ್ರಮಾಣ ಪತ್ರಗಳನ್ನು ನೀಡಿ ಪ್ರೋತ್ಸಾಹಿಸಲಾಯಿತು. ಈ ಸಂದರ್ಭದಲ್ಲಿ ನಗರ ಘಟಕದ ಅಧ್ಯಕ್ಷ ಎನ್. ಕನಕರಾಜು, ತಾಲ್ಲೂಕು ಕಸಾಪ ಉಪಾಧ್ಯಕ್ಷ ಜೆ.ಆರ್. ಮುನಿವೀರಣ್ಣ, ಜಿಲ್ಲಾ ಕೋಶಧ್ಯಕ್ಷ ಅಪ್ಪಯ್ಯಣ್ಣ, ಸಾಹಿತಿ ಶರಣಯ್ಯ ಹಿರೇಮಠ್, ಹಾಗೂ ಜೆಸಿಐ ಮಾಜಿ ಅಧ್ಯಕ್ಷ ಎನ್.ಸಿ. ಮುನಿವೆಂಕಟರಮಣ ಸೇ–ರಿದಂತೆ ಸ್ಥಳೀಯರು ಉಪಸ್ಥಿತರಿದ್ದರು.




# ಅಸ್ಕಿ ಕುಟುಂಬದಿಂದ ಪಿಎಸ್‌ಐ ಜ್ಯೋತಿ ಖೋತ್ ಗೆ ಸನ್ಮಾನ

**ನೈಜ್ಯ ದೇಸೆ ನ್ಯೂಸ್**

**ತಾಳಿಕೋಟೆ:** ತಾಲೂಕಿನ ಕೊಣ್ಣೂರ ಗ್ರಾಮದಲ್ಲಿ ಅಸ್ಕಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ ದಿವಂಗತ ಬಿ ಎಸ್ ಪಾಟೀಲ (ಸಾಸನೂರ) ಫೌಂಡೇಶನ್ ಇವರ ಸಹಯೋಗದಲ್ಲಿ ಹಮ್ಮಿಕೊಂಡ ಉಚಿತ ಆರೋಗ್ಯ ಶಿಬಿರ ಕಾರ್ಯಕ್ರಮದಲ್ಲಿ ತಾಳಿಕೋಟಿ ಪಿಎಸ್‌ಐ ಜ್ಯೋತಿ ಖೋತ್ ಅವರನ್ನು ಅಸ್ಕಿ ಪರಿವಾರದಿಂದ ಸನ್ಮಾನಿಸಿ ಗೌರವಿಸಲಾಯಿತು.




ಪೂಜ್ಯ ಸಿದ್ದಲಿಂಗ ದೇವರು ಸಾನಿಧ್ಯ ವಹಿಸಿದ್ದರು. ಶ್ರೀ ಶ್ರೀನಾಥಯ್ಯ ಹಿರೇಮಠ ನೇತೃತ್ವ ವಹಿಸಿದ್ದರು. ಗಣ್ಯರಾದ ಬಸನಗೌಡ ಹಡಲಗೇರಿ, ಡಾ.ಬಸವರಾಜ ಅಸ್ಕಿ, ಪ್ರಭುಗೌಡ ದೇಸಾಯಿ, ನಿರ್ದೇಶಕ ವಿಜಯ್ ಅಸ್ಕಿ, ಪ್ರಭುಗೌಡ ಮದರ್ಕಲ್, ಎಚ್‌ಎಸ್ ಪಾಟೀಲ,ಅ–ರವಿಂದ ಹೂಗಾರ,ಸಿ.ಬಿ.ಅಸ್ಕಿ,ಶಂಕರಗೌಡ ಹಿಪ್ಪರಗಿ,ಸಿ.ಸಿ.ಪಾಟೀಲ,ಡಾ. ಶ್ರೀಶೈಲ ಹುಕ್ಕೇರಿ,ಡಾ.ಪ್ರೀತಿ ವಿಜಯ, ಡಾ.ಅನೂಪ, ಶಂಕರಗೌಡ ಅಸ್ಕಿ,ಡಾ.ನಿಂಗರಾಜ, ಬಿ.ಎನ್.ಹಿಪ್ಪರಗಿ,ಎಸ್.ಎಂ.ಸಜ್ಜನ, ಜಿ.ಜಿ.ಅಸ್ಕಿ, ನಿಂಗನಗೌಡ ಪಾಟೀಲ, ಮಹೇಶ ಜೋಶಿ ಡಿ.ಕೆ.ಪಾಟೀಲ, ಮಲ್ಲು ಅಸ್ಕಿ ಬಿ.ವೈ.ಬಂಟನೂರ ಹಾಗೂ ಅಸ್ಕಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ವೈದ್ಯರು, ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಇದ್ದರು.

# ಅಭಿಮನ್ಯು ಪ್ರಶಸ್ತಿ ಪುರಸ್ಕೃತ ಪತ್ರಕರ್ತರಾದ ಚಂದ್ರಶೇಖರ ಬೆನ್ನೂರು ಅವರಿಗೆ ಕಾರುಣ್ಯಾಶ್ರಮದಿಂದ ಗೌರವ ಸನ್ಮಾನ

**ನೈಜ್ಯ ದೇಸೆ ನ್ಯೂಸ್**

**ಸಿಂಧನೂರು:** ತಾಲೂಕ ವಿಜಯ ಕರ್ನಾಟಕ ಕನ್ನಡ ದಿನಪತ್ರಿಕೆಯ ವರದಿಗಾರರಾದ ಚಂದ್ರಶೇಖರ ಬೆನ್ನೂರು ಅವರಿಗೆ 2026ನೇ ವರ್ಷದ ಕರ್ನಾಟಕ ಮಾಧ್ಯಮ ಅಕಾಡೆಮಿಯ ವತಿಯಿಂದ ಅವರ ಜನಪರ ಕಾಳಜಿಯ ವರದಿಗಳು ಮತ್ತು ಅವರ ಬರಹಗಳನ್ನಾಧರಿಸಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಿಂದ " "ಅಭಿಮನ್ಯು" ಎನ್ನುವ ವಿಶೇಷ ಪ್ರಶಸ್ತಿಯನ್ನು ಸ್ವೀಕ–ರಿಸಿದ ಹಿನ್ನೆಲೆಯಲ್ಲಿ ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀ ಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಿಂದ ಸನ್ಮಾನಿಸಿ ಗೌರವಿಸಿ ಶುಭ ಕೋರಿ ಆಶೀರ್ವದಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಅಭಿಮನ್ಯು ಪ್ರಶಸ್ತಿ ಪುರಸ್ಕೃತರು ಪತ್ರಕರ್ತರಾದ ಚಂದ್ರಶೇಖರ ಬೆನ್ನೂರು ಗೌರವ ಸ್ವೀಕರಿಸಿ ಮಾತನಾಡಿ ಇಂದಿನ ಈ ಕರುಣೆಯ ಕಾರುಣ್ಯ ಕುಟುಂಬದ ಆಶೀರ್ವಾದ ನನ್ನ ಪತ್ರಿಕೋದ್ಯಮಕ್ಕೆ ಹೆಚ್ಚಿನ ಜವಾಬ್ದಾರಿ ವಹಿಸಿದೆ. ಈ ಪ್ರಶಸ್ತಿ ಲಭಿಸಿರುವುದು ನಮ್ಮ ಸಿಂಧನೂರು ತಾಲೂಕಿನ ಜನರ ಸಹಕಾರ ಮತ್ತು ನನ್ನ



ಹೆತ್ತವರಿಗೆ ಮತ್ತು ನನ್ನ ಹಿತೈಷಿಗಳಿಗೆ ಈ ಪ್ರಶಸ್ತಿ ಅರ್ಪಣೆ. ಪತ್ರಿಕೋದ್ಯಮವು ಸಮಾಜದಲ್ಲಿ ವಿಶೇಷ ಅಂಗವಾಗಿ ಸಾಮಾಜಿಕ ಜವಾಬ್ದಾರಿಯನ್ನು ಮತ್ತು ನ್ಯಾಯಪರ ನಿಲುವುಗಳನ್ನು ಸಮಾಜ–ಕ್ಕೆ ತೋರಿಸುವ ಅಂಗವಾಗಿದೆ. ಮತ್ತು ವಿಶೇಷವಾಗಿ ಕಾರುಣ್ಯ ಆಶ್ರಮದ ಸೇವೆಯು ಪ್ರಾಮಾಣಿಕತೆಯಿಂದ ನೆಲೆ ಇಲ್ಲದ ನೊಂದವರ ಬಾಳಿಗೆ ನಾಡಿಬಿಡಿತವಾಗಿ ನಡೆಯುತ್ತಿದೆ. ಕಾರುಣ್ಯ ಆಶ್ರಮದ ಸತ್ಯ ಪ್ರಮಾಣಿಕ ಸೇವೆಗೆ ಟೀಕೆಗಳು ಸಾಯುತ್ತವೆ.

ಇದ್ಯಾವುದುಗಳಿಗೆ ಕಿವಿಗೊಡದೆ ಹರೇಟನೂರಿನ ಚನ್ನಬಸವ ಸ್ವಾಮಿಯವರು ಹಾಗೂ ಮಲ್ಲಿಕಾರ್ಜುನ ಸ್ವಾಮಿ ಹಿರೇಮಠ.ಅಶೋಕನಲ್ಲ. ಮತ್ತು ಇನ್ನಿತರ ಸ್ನೇಹ ಬಳಗದೊಂದಿಗೆ ಇಂತಹ ಕಾರ್ಯ ಭಗವಂತನಿಗೆ ಮೆಚ್ಚುವಂತಹ ಶ್ರೇಷ್ಠ ಕಾರ್ಯ ಇದಾಗಿದೆ. ಈ ಕಾರುಣ್ಯ ಕುಟುಂಬದ ಎಲ್ಲಾ ಕೂಸುಗಳ ಆಶೀರ್ವಾದ ನಿರಂತರವಾಗಿ ನಮ್ಮ ಮೇಲಿರಲಿ ಎಂದು ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪರಪ್ಪ ಚಂದ್ರಡ್ಡಿ ಸಾಹುಕಾರ ಬಾಗಲವಾಡ. ವೀರೇಶ ಕೋಟೆ ಶಿಕ್ಷಕರು. ಶಕೀಲ್ ಅಹಮದ್ ನಿವೃತ್ತ ಶಿಕ್ಷಕರು. ಬಸವರಾಜ ಮೈಲಾರ ನಿವೃತ್ತ ಶಿಕ್ಷಕರು. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಶ್ರೀ ಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಹಾಗೂ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ.ಜ್ಯೋತಿ. ಮೀನಾಕ್ಷಮ್ಮ ಲಕ್ಷ್ಮೀ. ಹಾಗೂ ಆಶ್ರಮದ ಆಶ್ರಯದಾತರುಗಳು ಉಪಸ್ಥಿತರಿದ್ದರು

## ಸಾಹಿತ್ಯ ಸಿಂಚನ

ಹುತಾತ್ಮ

ರಕ್ತದ ಹನಿ ಹನಿಯಿಂದ ಬರೆಯಲಾದ ಇತಿಹಾಸ,
ಮಣ್ಣಿನ ಸುಗಂಧದಲ್ಲಿ ಅವರ ಧೈರ್ಯದ ವಾಸ.

ದೇಶದ ಧ್ವಜದ ನೆರಳಲ್ಲಿ ನಿಂತ ನಿಸ್ವಾರ್ಥ ಜೀವಗಳು,
ನಮ್ಮ ಉಸಿರಿನಲ್ಲಿ ಜೀವಿಸುವ ಅಮರ ಕೀರ್ತಿಗಳು.

ಗುಂಡಿನ ಸದ್ದಿಗಿಂತ ಗಟ್ಟಿಯಾದ ಸಂಕಲ್ಪ,
ಭಯವನ್ನೇ ಸೋಲಿಸಿದ ಅವರ ಅಜೇಯ ಸ್ವಭಾವ.

ಮಾತಿಲ್ಲದೆ ಮಾಡಿದ ಮಹಾನ್ ತ್ಯಾಗ,
ಭಾರತದ ಹೃದಯದಲ್ಲಿ ಎಂದಿಗೂ ಅವರೇ ಭಾಗ.

ಮನೆ, ಕುಟುಂಬ ಎಲ್ಲವನ್ನೂ ಬಿಟ್ಟು ಹೋದವರು,
ಸ್ವಾತಂತ್ರ್ಯದ ದೀಪಕ್ಕೆ ಎಣ್ಣೆ ತುಂಬಿದವರು.

ನಮ್ಮ ನಾಳೆಯಿಗಾಗಿ ಇಂದನ್ನು ಅರ್ಪಿಸಿದವರು,
ಹುತಾತ್ಮರು ? ನಮ್ಮ ಹೆಮ್ಮೆಯ ತಾರೆಗಳು.

ಅವರ ಹೆಸರೇ ನಮ್ಮ ಪ್ರೇರಣೆ,
ಅವರ ಕಥೆಗಳೇ ನಮ್ಮ ಜೀವನದ ದಾರಿದೀಪ.

ತಲೆತಗ್ಗಿಸಿ ನಮಿಸೋಣ ಅವರಿಗೆ ಸದಾ,
ಹುತಾತ್ಮರ ತ್ಯಾಗಕ್ಕೆ ಶಾಶ್ವತ ವಂದನೆಗಳು.

ಅಮರೇಶ್ ಕೆ

## ರಾಯಚೂರು ಗ್ರಾಮೀಣಾಭಿವೃದ್ಧಿ' ತ್ರೈಮಾಸಿಕ ಪತ್ರಿಕೆ ಬಿಡುಗಡೆ: ಜಿಲ್ಲೆಯ ಅಭಿವೃದ್ಧಿಗೆ ಕೈಗನ್ನಡಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಯೋಜನೆಗಳು ಮತ್ತು ಸಾಧನೆಗಳ ಸಮಗ್ರ ಚಿತ್ರಣ ನೀಡುವ ಉದ್ದೇಶದೊಂದಿಗೆ ಹೊರತರಲಾಗಿರುವ 'ರಾಯಚೂರು ಗ್ರಾಮೀಣಾಭಿವೃದ್ಧಿ ಪತ್ರಿಕೆ' ಎಂಬ ತ್ರೈಮಾಸಿಕ ಮ್ಯಾಗಜೀನ್ ಅನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ (CEO) ಈಶ್ವರ್ ಕಾಂದೂ ಅವರು ಇಂದು ಜಿಲ್ಲಾ ಪಂಚಾಯತಿ ಕಚೇರಿಯಲ್ಲಿ ಬಿಡುಗಡೆಗೊಳಿಸಿದರು.**

ಪತ್ರಿಕೆ ಬಿಡುಗಡೆ ಮಾಡಿ ಮಾತನಾಡಿದ ಸಿಇಓ ಅವರು, ಜಿಲ್ಲೆಯ ಸಮಗ್ರ ಅಭಿವೃದ್ಧಿ ಹಾಗೂ ವಿವಿಧ ಇಲಾಖೆಗಳ ಸಾಧನೆಗಳನ್ನು ಸಾರ್ವಜನಿಕರಿಗೆ ತಲುಪಿಸಲು ಈ ಪತ್ರಿಕೆ ಪ್ರಮುಖ ವೇದಿಕೆಯಾಗಲಿದೆ ಎಂದು ಆಶಯ ವ್ಯಕ್ತಪಡಿಸಿದರು.ಈ ತ್ರೈಮಾಸಿಕ ಪತ್ರಿಕೆಯು ಶಾಲಾ ಮಕ್ಕಳು, ಮಹಿಳೆಯರು,



ರೈತರು, ಕಾರ್ಮಿಕರು ಹಾಗೂ ವಿಶೇಷ ಚೇತನರ ಕಲ್ಯಾಣಕ್ಕಾಗಿ ಜಾರಿಯಾಗಿರುವ ಕಾರ್ಯಕ್ರಮಗಳ ಮೇಲೆ ಬೆಳಕು ಚೆಲ್ಲುತ್ತದೆ. ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ (NRLM) ಅಡಿಯಲ್ಲಿ ಸಂಜೀವಿನಿ ಮಾರ್ಟ್, ಅಕ್ಕ-ಕಫೆ, ಕುಕ್ಕುಟ ಮತ್ತು ಮತ್ಯ ಸಂಜೀವಿನಿ ಘಟಕಗಳ ಮೂಲಕ ಮಹಿಳೆಯರಿಗೆ ನೀಡಲಾಗಿರುವ ಆರ್ಥಿಕ ಸ್ವಾವಲಂಬನೆಯ ಕು-ರಿತು ಪತ್ರಿಕೆಯಲ್ಲಿ ವಿಶೇಷ ಮಾಹಿತಿ ನೀಡಲಾಗಿದೆ.

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಗ್ರಾಮೀಣ ಕುಟುಂಬಗಳಿಗೆ 100 ದಿನಗಳ ಉದ್ಯೋಗ ನೀಡುವ ಮೂಲಕ ಆಸ್ತಿ ಸೃಜನೆ ಮಾಡುತ್ತಿರುವ ಬಗ್ಗೆ ಮಾಹಿತಿ ಹಂಚಿಕೊಳ್ಳಲಾಗಿದೆ.ಸ್ವಚ್ಛ ಭಾರತ ಮಿಷನ್ ಅಡಿಯಲ್ಲಿ ವೈಯಕ್ತಿಕ ಶೌಚಾಲಯಗಳ ನಿರ್ಮಾಣ ಹಾಗೂ ಘನ ತ್ಯಾಜ್ಯ ವಿಲೇವಾರಿ ಘಟಕಗಳ ಸ್ಥಾಪನೆಯ ಮೂಲಕ ಜಿಲ್ಲೆಯಲ್ಲಿ ಸಾಧಿಸಲಾದ ಪ್ರಗತಿಯನ್ನು ಶ್ಲಾಘಿಸಲಾಗಿದೆ. "ಜಿಲ್ಲೆಯ ಶಿಕ್ಷಣ, ಆರ್ಥಿಕ, ಸಾಮಾಜಿ-ಕ ಮತ್ತು ಸಾಂಸ್ಕೃತಿಕ ರಂಗಗಳಲ್ಲಿ ಆಗುತ್ತಿರುವ ಬದಲಾವಣೆಗಳನ್ನು ಈ ಪತ್ರಿಕೆ ಪ್ರತಿಬಿಂಬಿಸುತ್ತದೆ.


ಮಹಿಳೆಯರಿಗೆ ತರಬೇತಿ ನೀಡಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವುದು ನಮ್ಮ ಆದ್ಯತೆಯಾಗಿದೆ." ಈಶ್ವರ್ ಕಾಂದೂ, ಸಿಇಓ, ರಾಯಚೂರು ಜಿಲ್ಲಾ ಪಂಚಾಯತ್. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜೇರಿ, ಯೋಜನಾ ನಿರ್ದೇಶಕ ಶರಣಬಸವರಾಜ ಕೆ., ಮುಖ್ಯ ಯೋಜನಾಧಿಕಾರಿ ಡಾ. ಟಿ ರೋಣಿ, ಮುಖ್ಯ ಲೆಕ್ಕಾಧಿಕಾರಿ ವಿಜಯ ಶಂಕರ, ಸಹಾಯಕ ಕಾರ್ಯದರ್ಶಿ ರಾಘವೇಂದ್ರ ಸೇರಿದಂತೆ ಇಲಾಖೆಯ ವಿವಿಧ ಅಧಿಕಾ-ರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಮಾರ್ಚ್ 31 ರಂದು ಮಹಾವೀರ ಜಯಂತಿ: ಅರ್ಥಪೂರ್ಣ ಆಚರಣೆಗೆ ಜಿಲ್ಲಾಡಳಿತ ಸನ್ನದ್ಧ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾಡಳಿತದ ವತಿಯಿಂದ ಮಾರ್ಚ್ 31ರಂದು ಹಮ್ಮಿಕೊಳ್ಳಲಿರುವ ಭಗವಾನ್ ಮಹಾವೀರ ಜಯಂತಿಯನ್ನು ಜಿಲ್ಲೆಯಲ್ಲಿ ಅತ್ಯಂತ ಅರ್ಥಪೂರ್ಣವಾಗಿ ಆಚ-ರಿಸಲು ಅಗತ್ಯವಿರುವ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾ-ರಿಗಳಾದ ಶಿವಾನಂದ ಭಜಂತ್ರಿ ಅವರು ಅಧಿಕಾ-ರಿಗಳಿಗೆ ಸೂಚನೆ ನೀಡಿದರು.**

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಮಹಾವೀರ ಜಯಂತಿ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಕಾರ್ಯಕ್ರಮದ ಅಂದು ಮಹಾವೀರ ಅವರ ಭಾವಚಿತ್ರಕ್ಕೆ ಪುಷ್ಪಹಾರ ಸಮರ್ಪಣೆ ಹಾಗೂ ಪುಷ್ಪ ನಮನ ಸಲ್ಲಿಸಲಾಗುವುದು, ಬೆಳಿಗ್ಗೆ 8.30ಕ್ಕೆ ನಗರದ ಜೈನ್ ಮಂದಿರದಿಂದ ಮೆರವಣಿಗೆ ಆರಂಭವಾಗಲಿದ್ದು, ತೀನ್ ಕಂದಿಲ್ ಮತ್ತು ಮಹಾವೀರ ವೃತ್ತದ ಮಾರ್ಗವಾಗಿ ಸಾಗಿ ಪುನಃ ಜೈನ್ ಮಂದಿರಕ್ಕೆ ಬಂದು ತಲುಪಲಿದೆ, ಬೆಳಿಗ್ಗೆ 11 ಗಂಟೆಗೆ ಜೈನ್ ಮಂದಿರದ ಆರಾಧನ ಸಭಾ ಭವನದಲ್ಲಿ ಅಧಿಕೃತ ವೇದಿಕೆ ಕಾರ್ಯಕ್ರಮ ಜರುಗಲಿದೆ. ಮಹಾವೀರ ವೃತ್ತಕ್ಕೆ ಆಕರ್ಷಕ ವಿದ್ಯುತ್ ದೀಪಾಲಂಕಾರ ಮಾಡಬೇಕು.

ಮೆರವಣಿಗೆಯ ಹಾದಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ರಥದ ಸಿದ್ಧತೆ ಹಾಗೂ ಜೈನ್ ಮಂದಿರದ ಸುತ್ತಮುತ್ತ ನೈರ್ಮಲ್ಯ ಕಾಪಾಡುವ ಜವಾಬ್ದಾ-ರಿಯನ್ನು ರಾಯಚೂರು ಮಹಾನಗರ ಪಾಲಿಕೆಯ ಅಧಿಕಾರಿಗಳು ನಿರ್ವಹಿಸಬೇಕು. ಯಾವುದೇ ಲೋಪದೋಷಗಳಿಲ್ಲದೆ ಕಾರ್ಯಕ್ರಮ ಯಶಸ್ವಿಗೊಳಿಸಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದು ಎಡಿಸಿ ತಿಳಿಸಿದರು. ಮಹಾವೀರರ ತತ್ತ್ವಗಳು ಮತ್ತು ಸಂದೇಶಗಳನ್ನು ಸಾರುವ ನಿಟ್ಟಿನಲ್ಲಿ ಈ ಜಯಂತಿಯನ್ನು ಶಿಸ್ತುಬದ್ಧವಾಗಿ ಆಚರಿಸಲಾಗುವುದು. ಸಂಬಂಧಪಟ್ಟ ಅಧಿಕಾರಿಗಳು ತಮಗೆ ವಹಿಸಿದ ಜವಾಬ್ದಾರಿಗಳನ್ನು ತಕ್ಷಣವೇ ಪೂರೈಸಬೇಕು." ಶಿವಾನಂದ ಭಜಂತ್ರಿ, ಹೆಚ್ಚುವರಿ ಜಿಲ್ಲಾಧಿಕಾರಿಗಳು. ಸಭೆಯ ಆರಂಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ ಅವರು ಎಲ್ಲರನ್ನು ಸ್ವಾಗತಿಸಿದರು. ಸಭೆಯಲ್ಲಿ ಪ್ರಮುಖರಾದ ಮಹಾವೀರ ಹಾರದಾರ, ಅಶೋಕ ಲೋದಾ, ಎಸ್.ಎಸ್.ಜೈನ್ ಸಾವ್, ಗೌತಮಿ ಗಿಯ್, ರಾಜೇಂದ್ರ ಕುಮಾರ್ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಸರ್ಕಾರಿ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೋದಿಗೆ ಸುದೀರ್ಘ ನಾಯಕನ ಪಟ್ಟ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಭಾರತದ ರಾಜಕೀಯ ಭೂಪಟದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮತ್ತೊಂದು ಸುವರ್ಣ ಅಧ್ಯಾಯ ಬರೆದಿದ್ದು ಭಾರತದ ಇತಿಹಾಸದಲ್ಲಿ ಅತಿ ಸುದೀರ್ಘ ಅವಧಿಗೆ ಸರ್ಕಾರದ ಮುಖ್ಯಸ್ಥರಾಗಿ ಸೇವೆ ಸಲ್ಲಿಸಿದ ಕೀರ್ತಿಗೆ ಪಾತ್ರರಾಗಿದ್ದಾರೆ.**



ಈ ಮೂಲಕ ಸಿಕ್ಕಿಂನ ಮಾಜಿ ಮುಖ್ಯಮಂತ್ರಿ ಪವನ್ ಕುಮಾರ್ ಚಾಮ್ಲಿಂಗ್ ಅವರ ಹೆಸರಿನಲ್ಲಿದ್ದ ದಶಕಗಳ ಕಾಲದ ದಾಖಲೆಯನ್ನು ಪ್ರಧಾನಿ ನರೇಂದ್ರ ಮೋದಿ ಹಿಂದಿಕ್ಕಿದ್ದಾರೆ. ನರೇಂದ್ರ ಮೋದಿ ಅವರು ಗುಜರಾತ್ ಮುಖ್ಯಮಂತ್ರಿಯಾಗಿ ಮತ್ತು ದೇಶದ ಪ್ರಧಾನಿಯಾಗಿ ಒಟ್ಟು 24 ವರ್ಷಗಳಿಗೂ ಹೆಚ್ಚು ಕಾಲ ನಿರಂತರವಾಗಿ ಸರ್ಕಾರದ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಿದ್ದಾರೆ. ಪವನ್ ಕುಮಾರ್ ಚಾಮ್ಲಿಂಗ್ ಅವರು ಸಿಕ್ಕಿಂ ಮುಖ್ಯಮಂತ್ರಿಯಾಗಿ 24 ವರ್ಷ 165 ದಿನಗಳ ಕಾಲ ಅಧಿಕಾರದಲ್ಲಿದ್ದರು. ಅಕ್ಟೋಬರ್ 7, 2001 ರಂದು ಮೊದಲ ಬಾರಿಗೆ ಗುಜರಾತ್ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ್ದ ಮೋದಿ, ಸತತ ಮೂರು ಬಾರಿ ಅಲ್ಲಿ ಸೇವೆ ಸಲ್ಲಿಸಿದರು. ನಂತರ 2014 ರಿಂದ ಸತತ ಮೂರು ಬಾರಿ ಭಾರತದ ಪ್ರಧಾನಿಯಾಗಿ ದೇಶವನ್ನು ಮುನ್ನಡೆಸುತ್ತಿದ್ದಾರೆ. ನೆಹರು ದಾಖಲೆ ಹಿಂದಕ್ಕೆ : ಈ ಸಾಧನೆಯೊಂದಿಗೆ ಮೋದಿ ಅವರು ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರ ದಾಖಲೆಯನ್ನೂ ಕೇವಲ ಪ್ರಧಾನಿ ಹುದ್ದೆಯ ಅವಧಿ ಪರಿಗಣಿಸಿದರೆ ಮೀರಿಸುವ ಹಾದಿಯಲ್ಲಿದ್ದಾರೆ. ಆದ-ರೆ, ಒಟ್ಟಾರೆ 'ಸರ್ಕಾರದ ಮುಖ್ಯಸ್ಥ' ಎಂಬ ಸ್ಥಾನಮಾನದಲ್ಲಿ ಪ್ರಧಾನಿ ನರೇಂದ್ರ ಮೋದಿ ಈಗ ಅಗ್ರಸ್ಥಾನಕ್ಕೇರಿದ್ದಾರೆ. ಈ ಐತಿಹಾಸಿಕ ಮೈಲಿಗಲ್ಲು ತಲುಪಿದ ಮೋದಿಯವರಿಗೆ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಬಿಜೆಪಿಯ ಹಿರಿಯ ನಾಯಕರು ಮತ್ತು ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಅಭಿನಂದನೆ ಸಲ್ಲಿಸಿದ್ದಾರೆ. "ಸ್ಥಿರ ಆಡಳಿತ ಮತ್ತು ಜನಪ್ರಿಯತೆಗೆ ಈ ದಾಖಲೆಯೇ ಸಾಕ್ಷಿ" ಎಂದು ಬಣ್ಣಿಸಿದ್ದಾರೆ.

## ರಾಜ್ಯದಾದ್ಯಂತ ಮಾರ್ಚ್ 29ರವರೆಗೆ ಗುಡುಗು ಸಹಿತ ಆಲಿಕಲ್ಲು ಮಳೆ ಮುನ್ಸೂಚನೆ ಹಾಗೂ ತಾಪಮಾನ ಕುಸಿತ



ನೈಜ್ಯ ದೆಸೆ ನ್ಯೂಸ್

**ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ಮೇಲ್ಮೈ ಸುಳಿಗಾಳಿ ಹಾಗೂ ತೇವಾಂಶ ಭರಿತ ಮೋಡಗಳ ಪ್ರಭಾವದಿಂದಾಗಿ ಕರ್ನಾಟಕದ ಹಲವೆಡೆ ಮಾರ್ಚ್ 29ರವರೆಗೆ ಗುಡುಗು, ಮಿಂಚು ಸಹಿತ ಆಲಿಕಲ್ಲು ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.**

ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು, ಬೆಳಗಾವಿ, ಧಾರವಾಡ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆಯಿದೆ, ಕರಾವಳಿಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ವರ್ಷಧಾರೆಯಾಗಲಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಮೈಸೂರು, ಚಾಮರಾಜನಗರ, ಮಂಡ್ಯ, ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ರಾಯಚೂರು, ವಿಜಯಪುರ, ವಿಜಯನಗರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಬಿಸಿಲಿನ ಝಳದಿಂದ ತತ್ತರಿಸಿದ್ದ ರಾಜ್ಯದ ಜನತೆಗೆ ಮಳೆಯ ಮುನ್ಸೂಚನೆಯು ತಂಪಿನ ವಾತಾವರಣ ತಂದಿದೆ.

ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಗರಿಷ್ಠ ಮತ್ತು ಕನಿಷ್ಠ ತಾಪಮಾನದಲ್ಲಿ ಇಳಿಕೆಯಾಗಿದೆ. ಕಲಬುರಗಿ: 5.9 ಡಿಗ್ರಿ ಸೆಲ್ಸಿಯಸ್ ತಾಪಮಾನ ಕುಸಿತ ಕಂಡಿದೆ. ಬೆಳಗಾವಿ, ಬೀದರ್, ಚಿತ್ರದುರ್ಗ, ಧಾರವಾಡ, ಮಂಡ್ಯ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ತಲಾ 2.5 ಡಿಗ್ರಿ ಸೆಲ್ಸಿಯಸ್‌ನಷ್ಟು ಉಷ್ಣಾಂಶ ಇಳಿಮುಖವಾಗಿದೆ. ಮುಂದಿನ ಐದು ದಿನಗಳ ಕಾಲ ರಾಜ್ಯದ ಗ-ರಿಷ್ಠ ಮತ್ತು ಕನಿಷ್ಠ ತಾಪಮಾನದಲ್ಲಿ ಯಾವುದೇ ದೊಡ್ಡ ಬದಲಾವಣೆಗಳು ಇರುವುದಿಲ್ಲ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಹವಾಮಾನ ಇಲಾಖೆ ವರದಿ

## ರಾಜ್ಯ ರೈತ ಸಂಘದ ಪದಾಧಿಕಾರಿಗಳ ಪದಗ್ರಹಣ ಹಾಗೂ ರೈತ ಜಾಗೃತಿ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ಕೊಪ್ಪಳ: ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಕೊಪ್ಪಳ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ, ಶಾಲುದೀಕ್ಷಾ ಮತ್ತು ರೈತ ಜಾಗೃತಿ ಕಾರ್ಯಕ್ರಮವನ್ನು ಮಾರ್ಚ್ 22 ರಂದು ಬೆಳಗ್ಗೆ 10 ಗಂಟೆಗೆ ನಗರದ ಎ.ಆರ್. ಮೇಘರಾಜ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ ಎಂದು ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಶರಣಪ್ಪ ಮರಳಿ ತಿಳಿಸಿದ್ದಾರೆ.**

ಶನಿವಾರ ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ವಿವರಗಳನ್ನು ಹಂಚಿಕೊಂಡರು. ಉದ್ಘಾಟನೆ: ಪ.ಪೂ. ಶಶಿಕಾಂತ ಪಡಸಲಗಿ





(ಇಂಚಗೇರಿ ಮಠದ ಯುವ ಸನ್ಯಾಸಿ ಹಾಗೂ ರಾಜ್ಯ ಗೌರವಾಧ್ಯಕ್ಷರು). ಅಧ್ಯಕ್ಷತೆ: ಚುನ್ನಪ್ಪ ಪೂಜೇರಿ (ರಾಜ್ಯಾಧ್ಯಕ್ಷರು)., ಮುಖ್ಯ ಅತಿಥಿಗಳು: ಮಹೇಶಗೌಡ ಎಂ. ಸುಬೇದಾರ (ರಾಜ್ಯ ಕಾರ್ಯಾಧ್ಯಕ್ಷರು), ಶಿವಾನಂದ ಮುಗಳಿಹಾಳ (ಉಪಾಧ್ಯಕ್ಷರು), ಕಿಶನ್ ನಂದಿ (ಕಾರ್ಯದರ್ಶಿ) ಸೇ-ರಿದಂತೆ ಹಲವು ರಾಜ್ಯ ಮಟ್ಟದ ಮುಖಂಡರು ಭಾಗವಹಿಸಲಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶರಣಪ್ಪ ಮರಳಿ ಅವರು ಜಿಲ್ಲೆಯ ಜ್ವಲಂತ ಸಮಸ್ಯೆಗಳ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು: ಕೊಪ್ಪಳ ಸುತ್ತಮುತ್ತಲಿನ 20ಕ್ಕೂ ಹೆಚ್ಚು ಗ್ರಾಮಗಳ ಜನರು ಕಾರ್ಖಾನೆಗಳ ಧೂಳಿನಿಂದ ತತ್ತರಿಸಿದ್ದಾರೆ.

ಮಾಲಿನ್ಯಭರಿತ ಮೇವು ತಿಂದು ಜಾನುವಾರುಗಳು ಮೃತಪಡುತ್ತಿವೆ.ಜನ ಹಾಗೂ ಜಾನುವಾರುಗಳಿಗೆ ಕುಡಿಯಲು ಶುದ್ಧ ನೀರಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಸಮಸ್ಯೆಗಳ ವಿರುದ್ಧ ಸಂಘಟಿತ ಹೋರಾಟ ರೂಪಿಸಲು ಸಂಘಟನೆಯನ್ನು ಬಲಪಡಿಸಲಾಗುತ್ತಿದೆ. ದೇಶದಲ್ಲಿ ಪ್ರತಿ ನಾಲ್ಕು ನಿಮಿಷಕ್ಕೆ ಒಬ್ಬ ರೈತ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದು ಆತಂಕಕಾರಿ. ರೈತರ ಆತ್ಮಹತ್ಯೆಯಲ್ಲಿ ಭಾರತ ವಿಶ್ವದಲ್ಲೇ ಮೊದಲ ಸ್ಥಾನದಲ್ಲಿದ್ದರೆ, ಕರ್ನಾಟಕ ದೇಶದಲ್ಲಿ ಎರಡನೇ ಸ್ಥಾನದಲ್ಲಿದೆ. ಹಸಿರು ಕ್ರಾಂತಿಗೂ ಮೊದಲು ರೈತರ ಬದುಕು ನೆಮ್ಮದಿಯಾಗಿತ್ತು ಎಂದು ಅವರು ವಿಷಾದಿಸಿದರು.ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಮಹಮ್ಮದ್ ಇಸ್ಮಾಯಿಲ್ ನಾಲಬಂದ್, ಮುಖಂಡರಾದ ಸುಕುಮಿಯಪ್ಪ, ವಿರೇಶ ಅನ್ವಾಳ, ಭೀಮನಗೌಡ ಉಪಸ್ಥಿತರಿದ್ದರು.

## ಒಳಮೀಸಲಾತಿ ರೋಸ್ಟರ್ ಹಂಚಿಕೆಗೆ ವಿರೋಧ: 24 ರಂದು ಬೆಂಗಳೂರಿನಲ್ಲಿ ಸಮಾವೇಶ.

ನೈಜ್ಯ ದೆಸೆ ನ್ಯೂಸ್

**ಬಾಗೇಪಲ್ಲಿ: ಒಳಮೀಸಲಾತಿ ರೋಸ್ಟರ್ ಹಂಚಿಕೆ ವಿರೋಧಿಸಿ, ಹಳೇ ಮೀಸಲಾತಿ ನಿಯಮದಂತೆ ತ್ವ-ರಿತ ನೇಮಕಾತಿಗೆ ಆಗ್ರಹಿಸಿ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಮಾ.24ರಂದು ಬೆಳಗ್ಗೆ 10ಕ್ಕೆ ಬೃಹತ್ ಸಮಾವೇಶವನ್ನು ಕೈಗೊಂಡಿದ್ದು, ಇದರಲ್ಲಿ ಬಂಜಾರ, ಭೋವಿ, ಕೊರಮ, ಕೊರಚ, ಚರ್ಮಕಾರ, ಸೂಕ್ಷ್ಮ ಪರಿಶಿಷ್ಟ ಜಾತಿಗಳ ಸಮುದಾಯದವರು ಪಾಲ್ಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತಿ ಸದಸ್ಯರಾದ ಎಂ.ವಿ.ಕೃಷ್ಣಪ್ಪ ಕರೆ ನೀಡಿದರು.**

ಪಟ್ಟಣದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಭವನದಲ್ಲಿ ಭಾನುವಾರ ಭೋವಿ ಸಮಾಜ ಹಾಗೂ ಸೂಕ್ಷ್ಮ ಪರಿಶಿಷ್ಟ ಜಾತಿಗಳ ನೇತೃತ್ವದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ರಾಜ್ಯ ಸರ್ಕಾರ ಪರಿಶಿಷ್ಟ ಜಾತಿಗಳಿಗೆ ಅವೈಜ್ಞಾನಿಕ ಒಳಮೀಸಲಾತಿ ಹಾಗೂ ರೋಸ್ಟರ್ ಪದ್ಧತಿ ಜಾರಿ ಮಾಡಿದ್ದು, ಇದು ಎಸ್‌ಸಿ ಒಳಮೀಸಲಾತಿ ವರ್ಗೀಕರಣದಲ್ಲಿ ಸಿ-ಪ್ರವರ್ಗದಲ್ಲಿರುವ ಬಂಜಾರ, ಭೋವಿ, ಕೊರಚ, ಕೊರಮ, ಆದಿಯಾ, ಅಗೇರ ಸೇ-




ರಿದಂತೆ 63 ಜಾತಿಗಳಿಗೆ ಮಾರಕವಾಗಿದೆ. ರೋಸ್ಟರ್ ಪದ್ಧತಿ ಜೀವಂತ ಶವವಾಗಿದೆ.

ಈ ಅನ್ಯಾಯ ಸರಿಪಡಿಸಲು ಆಗ್ರಹಿಸಿ ಈ ಸಮಾವೇಶ ಆಯೋಜಿಸಿದ್ದು, ಈ ಸಮುದಾಯಗಳ ಪ್ರತಿ ಮನೆಯಿಂದ ಒಬ್ಬ ಸದಸ್ಯ ಭಾಗವಹಿಸುವ ಮೂಲಕ ಶಕ್ತಿ ಪ್ರದರ್ಶನ ಮಾಡಬೇಕಾಗಿದೆ. ಆದ-ರಿಂದ ಸಾಗರೋಪಾದಿಯಾಗಿ ಸಮುದಾಯದ ಜನರು ಆಗಮಿಸಬೇಕು ಎಂದು ತಿಳಿಸಿದರು. ಎಸ್‌ಸಿ ರೋಸ್ಟರ್ ಪದ್ಧತಿ ಪ್ರಕಾರ ಈ 63 ಸಮುದಾಯದವರಿಗೆ ಮೀಸಲು ಸೌಲಭ್ಯ ದೊರೆಯಬೇಕಾದರೆ ಎರಡು ತಲೆಮಾರು ಬೇಕಾಗುತ್ತದೆ. ಇದು ಶಾಶ್ವತವಾಗಿ ಜಾರಿಯಾದರೆ ಈ ಸಮುದಾಯಗಳೆಲ್ಲ ಅಧೋಗತಿಯತ್ತ ಮುಖ ಮಾಡಲಿವೆ. ಸಮಾಜದ ಬೆಳವಣಿಗೆಯೂ ಇಳಿಮುಖವಾಗಲಿದೆ ಎಂದು ಎಚ್ಚರಿಸಿದರು. ಅಪೂರ್ಣವಾಗಿರುವ ನ್ಯಾ.ನಾಗಮೋಹನದಾಸ್ ವರದಿಯಲ್ಲೇ 29 ಕೋಷ್ಟಕಗಳ ಪೈಕಿ 19 ಕೋಷ್ಟಕಗಳಲ್ಲಿ ಈ ಸಮುದಾಯಗಳು ಸಾಮಾಜಿಕವಾಗಿ ಹಿಂದುಳಿದಿವೆ.

ಸುಪ್ರೀಕೋರ್ಟ್ ತೀರ್ಪಿನ ಪ್ರಕಾರ ಹಿಂದುಳಿವಿಕೆಯ ಆಧಾರದ ಮೇಲೆ ಒಳಮೀಸಲಾತಿ ವರ್ಗೀಕರಣವಾದರೆ ಇವುಗಳೆಲ್ಲವೂ ಎ-ಪ್ರವರ್ಗದಲ್ಲಿ ಬರಬೇಕು. ಆದರೆ ರಾಜಕೀಯ ಶಕ್ತಿ, ಧ್ವನಿ ಇಲ್ಲದ ಕಾರಣ-ಕ್ಕೆ ಸಿ-ಪ್ರವರ್ಗಕ್ಕೆ ಸೇರಿಸಲಾಗಿದೆ. ಆದ್ದರಿಂದ ಒಳ ಮೀಸಲಾತಿ ವರ್ಗೀಕರಣವನ್ನೇ ಮರುಪ-ರಿಶೀಲನೆ ಮಾಡಬೇಕು ಎಂದು ಆಗ್ರಹಿಸಿದರು. ಕೇಂದ್ರ ಸರ್ಕಾರದಿಂದ ಜನಗಣತಿ ನಡೆಯಲಿದ್ದು, ಇದರಿಂದ ದೊರೆಯುವ ಎಸ್‌ಸಿ ಜನಸಂಖ್ಯೆ ದತ್ತಾಂಶದ ಮೇಲೆ ಒಳಮೀಸಲಾತಿ ನಿಗದಿಪಡಿಸಬೇಕು. ಈಗ ಆಗಿರುವ ಅನ್ಯಾಯ ಸರಿಪಡಿಸಿದ್ದರೆ ಸಿಡಿದೇಳಬೇಕಾಗುತ್ತದೆ ಎಂದು ಎಚ್ಚರಿಸಿದರು. ಭೋವಿ ಸಮಾಜದ ಜಿಲ್ಲಾ ಅದ್ಯಕ್ಷ ಪಿ.ಡಿ.ವೆಂಕಟರಾಮನ ಮಾತನಾಡಿ, ಮೀಸಲಾತಿ ವಿಷಯದಲ್ಲಿ ಅನ್ಯಾಯ ಮಾಡಿದ ಹಿಂದಿನ ಬಿಜೆಪಿ ಸರ್ಕಾರಕ್ಕೆ ಪಾಠ ಕಲಿಸಿದ್ದು, ಇದೀಗ ಒಳಮೀಸಲಾತಿಯಲ್ಲಿನ ಸಮಸ್ಯೆ ಬಗೆಹರಿಸದಿದ್ದರೆ ಕಾಂಗ್ರೆಸ್ ಸರ್ಕಾರಕ್ಕೂ ಪಾಠ ಕಲಿಸುವುದು ನಿಶ್ಚಿತ. ಎಸ್‌ಸಿ ಶೇ.15ರಷ್ಟು ಪ್ರಕಾರ ನೇಮಕಾತಿ ಕೈಗೊಂಡಿರುವುದು ತಾತ್ಕಾಲಿಕವಾಗಿ ನಿರಾಳತೆ ಸಿಕ್ಕಿದೆ.

ನಮಗೆ ದುರಾಸೆ ಇಲ್ಲ. ಎಸ್‌ಸಿಗಳೆಲ್ಲರನ್ನೂ ಜತೆಯಲ್ಲಿ ಕರೆದುಕೊಂಡು ಹೋಗಬೇಕು. ನ್ಯಾಯ ಕಲ್ಪಿಸಬೇಕು ಎಂದು ಆಗ್ರಹಿಸಿದರು. ಎಸ್‌ಸಿ-ಎಸ್‌ಟಿ ಮೀಸಲಾತಿ ಪ್ರಮಾಣ ಏರಿಕೆಯನ್ನು ಸಂವಿಧಾನದ 9ನೇ ಪರಿಚ್ಛೇದಕ್ಕೆ ಸೇರಿಸಬೇಕು. ಎಸ್‌ಸಿಪಿ-ಟಿಎಸ್‌ಪಿ ಹಣವನ್ನು ಪೂರ್ಣಪ್ರಮಾಣದಲ್ಲಿ ಪರಿಶಿಷ್ಟರ ಕಲ್ಯಾಣಕ್ಕೆ ಬಳಕೆ ಮಾಡಬೇಕು. ಅನ್ಯಉದ್ದೇಶಕ್ಕೆ ಬಳಕೆಗೆ ಕಡಿವಾಣ ಹಾಕಬೇಕು. ಹೀಗಾಗಿ, ಈ ಎಲ್ಲ ಬೇಡಿಕೆ ಈಡೇ-ರಿಕೆಗಾಗಿ ಬೆಂಗಳೂರಿನಲ್ಲಿ ಬೃಹತ್ ಸಮಾವೇಶವನ್ನು ರೂಪಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಭೋವಿ ಸಂಘದ ಅಧ್ಯಕ್ಷ ವಿನಯ್ ಕುಮಾರ್, ಅಶ್ವತ್ಥಪ್ಪ,ಶ್ರೀನಿವಾಸ್ ಕೆ.ವಿ.,ಲಂಬೂ ಶ್ರೀನಿವಾಸ್, ರಾಮಾಂಜನ'ಪ್ಪ,ನಾರಾಯಣಪ್ಪ,ವೆಂಕಟೇಶ್. ಲಂಬಾನಿ ಸಮುದಾಯದ ನಾಯಕ ಶ್ರೀನಿವಾಸ್ ನಾಯಕ್, ಆರ್., ಶಿವೇಂದ್ರ, ನರೇಂದ್ರ, ರಂಗಸ್ವಾಮಿ, ತಿಪ್ಪನ್ನ ಹಾಗೂ ಇತರರು ಹಾಜರಿದ್ದರು.

## ನೇಮಕಾತಿ ಪ್ರಕಟಣೆ

DHFWS ಕೊಪ್ಪಳ ನೇಮಕಾತಿ 2026-6 ಕ್ಲಿನಿಕಲ್ ಸೈಕಾಲಜಿಸ್ಟ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಆಊಊಈಘಖ ಕೊಪ್ಪಳ ನೇಮಕಾತಿ 2026: 6 ಕ್ಲಿನಿಕಲ್ ಸೈಕಾಲಜಿಸ್ಟ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಕೊಪ್ಪಳ ಮಾರ್ಚ್ 2026 ರ ಆಊ-ಈಘಖ ಕೊಪ್ಪಳ ಅಧಿಕೃತ ಅಧಿಸೂಚನೆಯ ಮೂಲಕ ಕ್ಲಿನಿಕಲ್ ಸೈಕಾಲಜಿಸ್ಟ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕೊಪ್ಪಳ ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಮಾರ್ಚ್ 25, 2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 11-03-2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25-ಮಾರ್ಚ್-2026 ಅಧಿಕೃತ ವೆಬ್‌ಸೈಟ್: koppal.nic.in

## ರಾಜ್ಯಸಭೆ, ವಿಧಾನ ಪರಿಷತ್‌ಗಳಲ್ಲಿ ಮುಸ್ಲಿಮರಿಗೆ ಪ್ರಾತಿನಿಧ್ಯದ ಷರತ್ತಿನ ಮೇಲೆ ಸಮರ್ಥ್‌ಗೆ ಟಿಕೆಟ್

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರಾಜ್ಯಸಭೆ ಹಾಗು ವಿಧಾನ ಪರಿಷತ್‌ಗಳಲ್ಲಿ ಮುಸ್ಲಿಮರಿಗೆ ರಾಜಕೀಯ ಪ್ರಾತಿನಿಧ್ಯ ನೀಡಬೇಕು ಎಂಬ ಷರತ್ತಿನ ಮೇಲೆ ದಾವಣಗೆರೆ ದಕ್ಷಿಣದ ಕಾಂಗ್ರೆಸ್ ಟಿಕೆಟ್ ಅನ್ನು ಎಸ್.ಎಸ್ ಮಲ್ಲಿಕಾರ್ಜುನ ಅವರ ಪುತ್ರ ಸಮರ್ಥ್‌ಗೆ ಬಿಟ್ಟುಕೊಡಲು ಮುಸ್ಲಿಂ ಸಮಾಜದ ಸಚಿವರು, ಶಾಸಕರು ಹಾಗು ಮುಖಂಡರು ಒಪ್ಪಿಗೆ ಸೂಚಿಸಿದ್ದಾರೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.**

ಶನಿವಾರ ರಾತ್ರಿ ಹತ್ತು ಗಂಟೆಯವರೆಗೂ ಎರಡೂ ಗುಂಪುಗಳ ಸಭೆ ವರಿಷ್ಠರ ಸಮ್ಮುಖದಲ್ಲಿ ನಡೆಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜ್ಯ ಉಸ್ತುವಾರಿ ಸುರ್ಜೆವಾಲ ಅವರು ಸಭೆ ನಡೆಸಿದರು. ವರಿಷ್ಠರು ಮುಸ್ಲಿಂ ಸಮುದಾಯದ ಮುಖಂಡರ ಮನವೊಲಿಸು ನಲ್ಲಿ ಯಶಸ್ವಿಯಾಗಿದ್ದು ಸಮರ್ಥ್ ಅವರಿಗೆ ಟಿಕೆಟ್ ಅಂತಿಮವಾಗಿದೆ. ಒಂದು ಮೂಲಗಳ ಪ್ರಕಾರ ಸಮರ್ಥ್ ಅವರಿಗೆ ಬಿ ಫಾರಂ ನೀಡಲಾಗಿದೆ ಎನ್ನಲಾಗಿದ್ದು, ಸೋಮವಾರ ನಾಮಪತ್ರ



ಸಲ್ಲಿಸಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡ ಭಾಗವಹಿಸಲಿದ್ದಾರೆ ಎಂದು ತಿಳಿದು ಬಂದಿದೆ.

ಸಭೆಯಲ್ಲಿ ಸಚಿವರಾದ ಜಮೀರ್ ಅಹ್ಮದ್, ಎಸ್.ಎಸ್. ಮಲ್ಲಿಕಾರ್ಜುನ್, ಭೈರತಿ ಸುರೇಶ್, ಶಾಸಕರಾದ ಹ್ಯಾರಿಸ್, ರಿಜ್ವಾನ್, ಹರ್ಷದ್ ಮುಂತಾದವರು ಭಾಗವಹಿಸಿದ್ದರು. ಭಾನುವಾರ ಬೆಳಿಗ್ಗೆ ದಾವಣಗೆರೆ ದಕ್ಷಿಣ ಹಾಗು ಬಾಗಲಕೋಟೆ ಕ್ಷೇತ್ರಗಳ ಆಯ್ಕೆಯನ್ನು ಅಭ್ಯರ್ಥಿಗಳ ಅಧಿಕೃತವಾಗಿ ಘೋಷಿಸಲಾಗುತ್ತದೆ ಎಂದು ತಿಳಿದು ಬಂದಿದೆ. ವಸತಿ ಸಚಿವ ಜಮೀರ್ ಅಹ್ಮದ್ ಸೇರಿದಂತೆ ಹಲವು ಮುಸ್ಲಿಂ ಮುಖಂಡರು ಅಲ್ಪ ಸಂಖ್ಯಾತ ಅಭ್ಯರ್ಥಿಗೆ ಟಿಕೆಟ್ ನೀಡಬೇಕು ಎಂದು ಪಟ್ಟು ಹಿಡಿದಿದ್ದರು. ಜಮೀರ್ ಅಹ್ಮದ್ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವ ಬೆದರಿಕೆಯನ್ನೂ ಹಾಕಿದ್ದರೆನ್ನಲಾಗಿದೆ.

ಇನ್ನೊಂದೆಡೆ ಅಖಿಲ ಭಾರತ ವೀರಶೈವ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷ ಈಶ್ವರ್ ಖಂಡ್ರೆ ಸೇರಿದಂತೆ ಹಲವರು ಎಸ್.ಎಸ್.ಮಲ್ಲಿಕಾರ್ಜುನ್ ಪುತ್ರ



ಸಮರ್ಥ್‌ಗೆ ಟಿಕೆಟ್ ನೀಡುವಂತೆ ಬಿಗಿ ಪಟ್ಟು ಹಾಕಿದ್ದರು. ಉಭಯ ಮುಖಂಡರು ಶನಿವಾರ ರಾತ್ರಿ ಒಂದು ಒಪ್ಪಂದಕ್ಕೆ ಬಂದಿದ್ದು ಅಭ್ಯರ್ಥಿಗಳನ್ನು ಅಂತಿಮಗೊಳಿಸುವಲ್ಲಿ ವರಿಷ್ಠರು ಸಫಲರಾದರು ಎನ್ನಲಾಗಿದೆ. ಮುಂಬರುವ ರಾಜ್ಯಸಭೆ 'ಮತ್ತು ವಿಧಾನ ಪರಿಷತ್‌ಗಳಲ್ಲಿ ಅಲ್ಪಸಂಖ್ಯಾತರಿಗೆ ಪ್ರಾತಿನಿಧ್ಯ ನೀಡಬೇಕೆಂಬ ಷರತ್ತಿನ ಮೇಲೆ ಸಮಸ್ಯೆ ಬಗೆಹರಿದಿದೆ ಎಂದು ತಿಳಿದು ಬಂದಿದೆ. ಬಾಗಲಕೋಟೆ ಕ್ಷೇತ್ರದಲ್ಲಿ ಹೆಚ್.ವೈ. ಮೇಟಿ ಅವರ ಪುತ್ರ ಉಮೇಶ್ ಮೇಟಿಗೆ ಟಿಕೆಟ್ ಅಂತಿಮ ಗೊಳಿಸಲಾಗಿದೆ.

## ಅರೇಬಿಯನ್ ಸಮುದ್ರದಲ್ಲಿ ಶಸ್ತ್ರಸಜ್ಜಿತ ಬ್ರಿಟಿಷ್ ಜಲಾಂತರ್ಗಾಮಿ ನೌಕೆ ನಿಯೋಜನೆ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಸಂಘರ್ಷದ ಮಧ್ಯೆ, ಟೊಮಾಹಾಕ್ ಕ್ರೂಸ್ ಕ್ಷಿಪಣಿಗಳಿಂದ ಶಸ್ತ್ರಸಜ್ಜಿತವಾದ ಬ್ರಿಟಿಷ್ ನೌಕಾಪಡೆಯ ಜಲಾಂತರ್ಗಾಮಿ ನೌಕೆಯನ್ನು ಅರೇಬಿಯನ್ ಸಮುದ್ರದಲ್ಲಿ ನಿಯೋಜಿಸಲಾಗಿದೆ. ಪರಮಾಣು ಚಾಲಿತ ಜಲಾಂತರ್ಗಾಮಿ ನೌಕೆ ಹೆಚ್‌ಎಂಎಸ್, ಈ ತಿಂಗಳ ಆರಂಭದಲ್ಲಿ ಪರ್ತ್‌ನಿಂದ ಹೊರಟು ಸುಮಾರು 5,500 ಮೈಲುಗಳಷ್ಟು ದೂರ ಪ್ರಯಾಣಿಸಿ ಈ ಪ್ರದೇಶಕ್ಕೆ ತಲುಪಿತು ಎಂದು ಮಿಲಿಟರಿ ಮೂಲಗಳನ್ನು ಉಲ್ಲೇಖಿಸಿ ಡೈಲಿ ಮೇಲ್ ವರದಿ ಮಾಡಿದೆ.**



ಟೊಮಾಹಾಕ್ ಬ್ಲಾಕ್ 14 ಕ್ಷಿಪಣಿಗಳು ಮತ್ತು ಸ್ಪಿಯರ್‌ಫಿಶ್ ಹೆವಿವೇಯ್ಟ್ ಟಾರ್ಪಿಡೊಗಳಿಂದ ಶಸ್ತ್ರಸಜ್ಜಿತವಾದ ಬ್ರಿಟಿಷ್ ಜಲಾಂತರ್ಗಾಮಿ ನೌಕೆಯು 1ಸಾವಿರ ಮೈಲುಗಳು (1,600 ಕಿಮೀ) ವ್ಯಾಪ್ತಿಯ ಕ್ಷಿಪಣಿಗಳನ್ನು ಹಾರಿಸಬಲ್ಲದು. ಅನ್ಸನ್ ಯುಕೆ ನೌಕಾಪಡೆಗೆ ಸೇರ್ಪಡೆಗೊಂಡ ಹೊಸ ಅಸ್ಟ್ಯೂಟ್ ಕ್ಲಾಸ್ ಜಲಾಂತರ್ಗಾಮಿ ನೌಕೆಗಳಲ್ಲಿ ಐದನೆಯದಾಗಿದ್ದು, ದೇಶದ ರಕ್ಷಣಾ ಸಚಿವಾಲಯದ ಪ್ರಕಾರ,ಹೆಚ್‌ಎಂಎಸ್ ಅಸ್ಟ್ಯೂಟ್, ಆಂಬುಷ್, ಆರ್ಟ್‌ಫುಲ್ ಮತ್ತು ಆಡಾಸಿಯಸ್‌ಗೆ ಸೇರುತ್ತದೆ. ಅಸ್ಟ್ಯೂಟ್ ಕ್ಲಾಸ್ ಯುಕೆ ನೌಕಾಪಡೆಯಿಂದ ಇದುವರೆಗೆ ನಿರ್ವಹಿಸಲ್ಪಡುವ ಅತಿದೊಡ್ಡ, ಅತ್ಯಂತ ಮುಂದುವರಿದ ಮತ್ತು ಅತ್ಯಂತ ಶಕ್ತಿಶಾಲಿ ದಾಳಿ ಜಲಾಂತರ್ಗಾಮಿ ನೌಕೆಯಾಗಿದೆ. ಯುದ್ಧಪೀಡಿತ ಮಧ್ಯಪ್ರಾಚ್ಯ ಪ್ರದೇಶದ ಬಳಿ ಈ ನೌಕೆಯ ಸ್ಥಾನವು ಸಂಘರ್ಷ ಹೆಚ್ಚಾದರೆ ಇರಾನ್ ಮೇಲೆ ಕ್ಷಿಪಣಿಗಳನ್ನು ಹಾರಿಸಲು ಅನುವು ಮಾಡಿಕೊಡುತ್ತದೆ. ನಿಯೋಜನೆಯ ಕುರಿತು ಬ್ರಿಟಿಷ್ ರಕ್ಷಣಾ ಸಚಿವಾಲಯದಿಂದ ಯಾವುದೇ ಅಧಿಕತ ಮಾಹಿತಿ ಇಲ್ಲ. ಇರಾನ್‌ನಿಂದ ಹಾರ್ಮುಜ್ ಜಲಸಂಧಿಯ ಮೇಲೆ ನಡೆಯುತ್ತಿರುವ ದಿಗ್ಬಂಧನದ ಮಧ್ಯೆಯೂ, ಕಿರಿದಾದ ಆದರೆ ನಿರ್ಣಾಯಕ ಸಮುದ್ರ ಮಾರ್ಗವನ್ನು ಉಸಿರುಗಟ್ಟಿಸುವ ಮತ್ತು ಜಾಗತಿಕ ಇಂಧನ ಮತ್ತು ಕಚ್ಚಾ ತೈಲ ಪೂರೈಕೆಯ ಮೇಲೆ ಪರಿಣಾಮ ಬೀರುವ ಮಧ್ಯೆಯೂ, ಜಲಾಂತರ್ಗಾಮಿ ನೌಕೆಯನ್ನು ನಿಯೋಜಿಸುವ ಯುಕೆಯ ಕ್ರಮವು ಬಂದಿದೆ. ಯುಕೆ ಸೇರಿದಂತೆ ಇಪ್ಪತ್ತೆರಡು ರಾಷ್ಟ್ರಗಳು ಕೊಲ್ಲಿಯಲ್ಲಿ ಹಡಗುಗಳ ಮೇಲೆ ಇರಾನ್ ನಡೆಸಿದ ದಾಳಿ ಮತ್ತು ಹಾರ್ಮುಜ್ ಜಲಸಂಧಿಯನ್ನು ಮುಚ್ಚಿರುವುದನ್ನು ಜಂಟಿಯಾಗಿ ಖಂಡಿಸಿವೆ. ಆಸ್ಟ್ರೇಲಿಯಾ, ಯುಕೆ ಮತ್ತು ಯುಎಸ್ ನಡುವಿನ ತ್ರಿಪಕ್ಷೀಯ ಭದ್ರತಾ ಪಾಲುದಾರಿಕೆಯ ಭಾಗವಾಗಿ, ?..ಎಂದು ಕರೆಯಲ್ಪಡುವ ಎಫ್‌ಜೆಎಸ್ ಆನ್ಸನ್ ಕಳೆದ ತಿಂಗಳು ಆಸ್ಟ್ರೇಲಿಯಾಕ್ಕೆ ಆಗಮಿಸಿತು. ಡೈಲಿ ಮೇಲ್ ವರದಿಯ ಪ್ರಕಾರ, ಈ ತಿಂಗಳ ಆರಂಭದಲ್ಲಿ ಜಲಾಂತರ್ಗಾಮಿ ಪರ್ತ್‌ನಿಂದ ಹೊರಟು ಸುಮಾರು 5,500 ಮೈಲುಗಳಷ್ಟು ದೂರ ಪ್ರಯಾಣಿಸಿ ಆ ಪ್ರದೇಶಕ್ಕೆ ತಲುಪಿತು.

## ರಾಷ್ಟ್ರೀಯ ಹೆದ್ದಾರಿಯಲ್ಲಿ ಭೀಕರ ರಸ್ತೆ ಅಪಘಾತ ಇಬ್ಬರ ದುರ್ಮರಣ



ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಲಾರಿಯ ಚಾಲಕ ಮತ್ತು ಕ್ಲೀನರ್ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಶುಕ್ರವಾರ ನಡೆದಿದೆ. ಟೈರ್ ಸಿಡಿದ ಪರಿಣಾಮ ನಿಯಂತ್ರಣ ತಪ್ಪಿದ ಲಾರಿ ಮತ್ತೊಂದು ವಾಹನಕ್ಕೆ ಡಿಕ್ಕಿ ಹೊಡೆದಿದ್ದರಿಂದ ಈ ದುರಂತ ಸಂಭವಿಸಿದೆ.**

ವಿಆರ್‌ಎಲ್ (VRL) ಸಂಸ್ಥೆಗೆ ಸೇರಿದ ಲಾರಿಯು ಸೋಲಾಪುರದಿಂದ ಬಟ್ಟೆ ಸಾಮಗ್ರಿಗಳನ್ನು ತುಂಬಿಕೊಂಡು ಗಂಗಾವತಿಯತ್ತ ಸಾಗುತ್ತಿತ್ತು. ಮಾರ್ಗಮಧ್ಯೆ ಲಾರಿಯ ಮುಂದಿನ ಚಕ್ರದ ಟೈರ್ ಹಠಾತ್ತಾಗಿ ಸಿಡಿದಿದೆ. ಇದರಿಂದಾಗಿ ಲಾರಿಯು ಮೊದಲು ರಸ್ತೆ ವಿಭಜಕಕ್ಕೆ (Divider) ಡಿಕ್ಕಿ ಹೊಡೆದು, ನಂತರ ಹೊಸಪೇಟೆಯಿಂದ ಕುಷ್ಟಗಿ ಕಡೆಗೆ ಬರುತ್ತಿದ್ದ ಟಿಪ್ಪರ್‌ಗೆ ಬಲವಾಗಿ ಗುದ್ದಿದೆ. ಮೃತರನ್ನು ಯಲಬುರ್ಗಾ ತಾಲ್ಲೂಕಿನ ಕಟಗಿಹಳ್ಳಿ ಗ್ರಾಮದ ನಿವಾಸಿಗಳಾದ ಗೋವಿಂದಪ್ಪ ಹನುಮಂತಪ್ಪ ಆನೆಗುಂದಿ (38) (ಚಾಲಕ) ಮತ್ತು ಹುಚ್ಚಪ್ಪ ಶಿವಲಿಂಗಪ್ಪ ಬೊಮ್ಮನಾಳ (35) (ಕ್ಲೀನರ್) ಎಂದು ಗುರುತಿಸಲಾಗಿದೆ.

ಡಿಕ್ಕಿಯ ರಭಸಕ್ಕೆ ಇಬ್ಬರ ದೇಹಗಳು ಛಿದ್ರಗೊಂಡು ರಸ್ತೆಯ ಮೇಲೆ ಬಿದ್ದಿದ್ದವು. ಅಪಘಾತದ ತೀವ್ರತೆಗೆ ಲಾರಿಯಿಂದ ಡೀಸೆಲ್ ಸೋರಿಕೆಯಾಗಿ ರಸ್ತೆಯಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ತಕ್ಷಣ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿಯನ್ನು ನಂದಿಸಿ ಹೆಚ್ಚಿನ ಅನಾಹುತವನ್ನು ತಪ್ಪಿಸಿದ್ದಾರೆ. ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ರಾಮ್ ಎಲ್. ಅರಸಿದ್ದಿ ಹಾಗೂ ಇತರೆ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪೊಲೀಸರು ಸಾರ್ವಜನಿಕರ ನೆರವಿನೊಂದಿಗೆ ರಸ್ತೆಯ ಮೇಲೆ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದ ವಾಹನದ ಅವಶೇಷಗಳನ್ನು ಹಾಗೂ ಮೃತದೇಹಗಳನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ಈ ಕುರಿತು ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬಳ್ಳಾರಿ ಭಾಗದ ರೈಲ್ವೆ ಸಮಸ್ಯೆಗಳ ಕುರಿತು ಸಂಸದ ಈ. ತುಕಾರಾಂ ಅವರಿಗೆ ಕರ್ನಾಟಕ ರಾಜ್ಯ ರೈಲ್ವೆ ಕ್ರಿಯಾ ಸಮಿತಿಯಿಂದ ಮನವಿ

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ: ಕರ್ನಾಟಕ ರಾಜ್ಯ ರೈಲ್ವೆ ಕ್ರಿಯಾ ಸಮಿತಿಯು ಬಳ್ಳಾರಿ ಜಿಲ್ಲೆಯ ವಿವಿಧ ರೈಲ್ವೆ ಯೋಜನೆಗಳ ಅನುಷ್ಠಾನ ಮತ್ತು ರೈಲುಗಳ ಸಂಚಾರ ಪುನರಾರಂಭಿಸುವಂತೆ ಒತ್ತಾಯಿಸಿ ಶನಿವಾರ ಸಂಸದ ಈ. ತುಕಾರಾಂ ಅವರನ್ನು ಭೇಟಿ ಮಾಡಿ ಸವಿಸ್ತಾರವಾದ ಮನವಿ ಪತ್ರ ಸಲ್ಲಿಸಿತು. ಕೆ. ಎಂ. ಮಹೇಶ್ವರಸ್ವಾಮಿ ಅವರ ನೇತೃತ್ವದಲ್ಲಿ ನಡೆದ ಈ ಸಭೆಯಲ್ಲಿ ಸುಮಾರು ಒಂದು ಗಂಟೆ ಕಾಲ ಪ್ರಮುಖ ಬೇಡಿಕೆಗಳ ಕುರಿತು ಚರ್ಚಿಸಲಾಯಿತು.**

ಬಳ್ಳಾರಿ ಮಾರ್ಗವಾಗಿ ಬೆಂಗಳೂರಿಗೆ ನಿತ್ಯ ಬೆಳಿಗ್ಗೆ ಸಂಚರಿಸುವಂತೆ 'ವಂದೇ ಭಾರತ್' ಅಥವಾ ಇಂಟರ್‌ಸಿಟಿ ರೈಲನ್ನು ಪ್ರಾರಂಭಿಸಬೇಕು.ಈ ಹಿಂದೆ ಸಂಚರಿಸುತ್ತಿದ್ದ ಕೊಲ್ಹಾಪುರ-ಮುನಗೂರು ಮತ್ತು ಶಿವಮೊಗ್ಗ-ಚೆನ್ನೈ ರೈಲುಗಳನ್ನು ಪುನಃ ಆರಂಭಿಸಬೇಕು. ಬಳ್ಳಾರಿಯ ಬೈಪಾಸ್ ರೈಲ್ವೆ ನಿಲ್ದಾಣವನ್ನು ಕಾರ್ಯಗತಗೊಳಿಸಿ, ಮೈಸೂರು-ಅಜ್ಮೀರ್



ರೈಲು ಬಳ್ಳಾರಿ-ಹೊಸಪೇಟೆ ಮಾರ್ಗವಾಗಿ ಸಂಚರಿಸುವಂತೆ ಕ್ರಮ ಕೈಗೊಳ್ಳಬೇಕು.ಬಳ್ಳಾರಿ-ಸಿರುಗುಪ್ಪ ಮತ್ತು ಸಿಂಧನೂರು ನೂತನ ರೈಲ್ವೆ ಮಾರ್ಗಗಳನ್ನು ಶೀಘ್ರವಾಗಿ ಆರಂಭಿಸಬೇಕು ಹಾಗೂ ಹಗರಿ ಆದ-ನಿ ರೈಲ್ವೆ ಮಾರ್ಗಕ್ಕೆ ಚಾಲನೆ ನೀಡಬೇಕು. ಬಳ್ಳಾರಿ ನಗರದ ಸಂಚಾರ ದಟ್ಟಣೆ ನಿವಾರಣೆಗೆ ಪೂರಕವಾದ, ಹಲವು ದಿನಗಳಿಂದ ನೆನೆಗುದಿಗೆ ಬಿದ್ದಿರುವ ಸುಧಾ ಕ್ರಾಸ್ ರೈಲ್ವೆ ಬ್ರಿಡ್ಜ್ ಹಾಗೂ ರೇಡಿಯೋಪಾರ್ಕ್ ರೈಲ್ವೆ ಮೇಲ್ಸೇತುವೆ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಮತ್ತು ಬಳ್ಳಾರಿ ರೈಲ್ವೆ ನಿಲ್ದಾಣದ ಸಮಗ್ರ ಅಭಿವೃದ್ಧಿ ಕುರಿತು ಸಮಿತಿಯು ಸಂಸದರ ಗಮನ ಸೆಳೆಯಿತು. ಮನವಿ ಆಲಿಸಿದ ಸಂಸದ ಈ. ತುಕಾರಾಂ ಅವರು ಮಾತನಾಡಿ, "ಸುಧಾ ಕ್ರಾಸ್ ಮತ್ತು ರೇಡಿಯೋಪಾರ್ಕ್ ಮೇಲ್ಸೇತುವೆ ಕಾಮಗಾರಿಗಳಿಗೆ ಇದ್ದ ಅಡೆತಡೆಗಳು ಈಗ ನಿವಾರಣೆಯಾಗಿವೆ. ಮುಂದಿನ ದಿನಗಳಲ್ಲಿ ಈ ಕಾಮಗಾರಿಗಳು ವೇಗ ಪಡೆದುಕೊಳ್ಳಲಿವೆ," ಎಂದು ಭರವಸೆ ನೀಡಿದರು.

ಅಲ್ಲದೆ, ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಹೊಸ ರೈಲುಗಳ ಬೇಡಿಕೆಯನ್ನು ಈಡೇರಿಸಲು ಪ್ರಯತ್ನಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಸಮಿತಿಯ ಮುಖಂಡರಾದ ಪಿ. ಯೋಗಿರಾಜ್, ಕುಪಗಲ್ ವೀರೇಶ್, ಪಿ. ಬಂಡೇಗೌಡ, ಎಚ್.ಕೆ. ಗೌರಿಶಂಕರ್, ಕೆ. ಎಂ. ಉಮಾಪತಿಗೌಡ, ಬಿ.ಎಂ. ಎರ್ರಿಸ್ವಾಮಿ, ಸಿಂಧುವಾಳ ಮಹೇಶ್ ಗೌಡ, ಎ.ಪಿ. ಉಮೇಶ್, ಬಸವರಾಜ್, ಶ್ರೀಧರಗೌಡ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ನೀರನ್ನು ಉಳಿಸುವುದು ಮುಂದಿನ ಪೀಳಿಗೆಗೆ ನಾವು ನೀಡುವ ಅತ್ಯುತ್ತಮ ಉಡುಗೊರೆ: ಸಚಿವ ಎಂ.ಬಿ. ಪಾಟೀಲ್

ನೈಜ್ಯ ದೆಸೆ ನ್ಯೂಸ್

**ವಿಜಯಪುರ: "ನಮ್ಮ ಪೂರ್ವಜರು ನಮಗಾಗಿ ಉಳಿಸಿಹೋಗಿರುವ ಜಲಮೂಲಗಳನ್ನು ಸಂರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಇಂದಿನ ಹನಿ ನೀರನ್ನು ಉಳಿಸುವುದೇ ನಾಳೆಯ ಬದುಕಿನ ಭರವಸೆಯಾಗಿದೆ" ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ. ಪಾಟೀಲ್ ಅವರು ಕರೆ ನೀಡಿದ್ದಾರೆ.**

ವಿಶ್ವ ಜಲ ದಿನದ ಅಂಗವಾಗಿ



ಸಾಮಾಜಿಕ ಜಾಲತಾಣ 'ಎಕ್ಸ್' (X) ಮೂಲಕ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ಅವರು, ನೀರು ಸಂರಕ್ಷಣೆಯ ಬಗ್ಗೆ ಈ ಕೆಳಗಿನ ಪ್ರಮುಖ ಅಂಶಗಳನ್ನು ಹಂಚಿಕೊಂಡಿದ್ದಾರೆ: ನಮ್ಮ ಹಿರಿಯರು ನಿರ್ಮಿಸಿದ ಅಮೂಲ್ಯವಾದ ಕೆರೆ-ಕಟ್ಟೆಗಳು, ಕಲ್ಯಾಣಿಗಳು ಹಾಗೂ ಬಾವಿಗಳನ್ನು ಅಳಿವಿನಿಂದ ರಕ್ಷಿಸಿ, ಅವುಗಳನ್ನು ಪುನಶ್ಚೇತನಗೊಳಿಸುವುದು ನಮ್ಮ ಜವಾಬ್ದಾರಿಯಾಗಿದೆ. ನೀರನ್ನು ಮಿತವಾಗಿ ಬಳಸುವುದು ಮತ್ತು ಬಳಸಿದ ನೀರನ್ನು ಮರುಬಳಕೆ ಮಾಡುವತ್ತ ಪ್ರತಿಯೊಬ್ಬರೂ ಗಮನಹರಿಸಬೇಕು. ಇದು ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಸಹಕಾರಿಯಾಗುತ್ತದೆ. ನಾವು ಮುಂದಿನ ಪೀಳಿಗೆಗೆ ನೀಡಬಹುದಾದ ಅತ್ಯುತ್ತಮ ಉಡುಗೊರೆ ಹಣ ಅಥವಾ ಆಸ್ತಿಯಲ್ಲ, ಬದಲಾಗಿ 'ಶುದ್ಧ ಕುಡಿಯುವ ನೀರು'. ಇದೇ ಈ ದಿನದ ನಿಜವಾದ ಆಶಯವಾಗಿದೆ. ವಿಶ್ವ ಜಲ ದಿನದ ಅಂಗವಾಗಿ ನೀರು ಸಂರಕ್ಷಣೆಯ ಕುರಿತು ವ್ಯಾಪಕವಾದ ಜಾಗೃತಿ ಕಾರ್ಯಕ್ರಮಗಳು ನಡೆಯಬೇಕು ಎಂದು ಅವರು ಆಶಿಸಿದ್ದಾರೆ. "ಬನ್ನಿ, ಈ ವಿಶ್ವ ಜಲ ದಿನದಂದು ನೀರನ್ನು ವ್ಯರ್ಥ ಮಾಡದೆ, ಅದನ್ನು ಸಂರಕ್ಷಿಸುವ ದೃಢ ಸಂಕಲ್ಪವನ್ನು ಮಾಡೋಣ" ಎಂದು ಸಚಿವರು ಜನತೆಯಲ್ಲಿ ಮನವಿ ಮಾಡಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಆರೋಗ್ಯ ಶಿಬಿರಗಳ ಸದುಪಯೋಗ ಮಾಡಿಕೊಳ್ಳಿ: ಮಾಜಿ ಶಾಸಕ ಪಾಟೀಲ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ವ್ಯಾಪಾರಿ ಮನೋಭಾವವಿಲ್ಲದೆ ಕಡಿಮೆ ವೆಚ್ಚದಲ್ಲಿ ಬಡವರ ಸೇವೆಯನ್ನು ಮಾಡಬೇಕೆಂಬ ಉದ್ದೇಶದಿಂದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತೆರೆದು ಹಗಲಿರುಳು ಶ್ರಮಿಸುತ್ತಿರುವ ವಿಜಯ್ ಅಸ್ಕಿ ದಂಪತಿಗಳ ಕಾರ್ಯ ನಿಜಕ್ಕೂ ಶ್ಲಾಘನೀಯವಾಗಿದ್ದು ಅವರಿಗೆ ನಿಮ್ಮೆಲ್ಲರ ಸಹಕಾರ ಇರಲಿ ಎಂದು ಮಾಜಿ ಶಾಸಕ ಸೋಮನಗೌಡ ಬಿ.ಪಾಟೀಲ (ಸಾಸನೂರ)ಹೇಳಿದರು.**

ತಾಲೂಕಿನ ಕೊಣ್ಣೂರ ಗ್ರಾಮದ ಬಲವಂತರಾಯ ಹಡಲಗೇರಿ ಹೈಸ್ಕೂಲ್ ಮೈದಾನದಲ್ಲಿ ಅಸ್ಕಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಬಾಗಲಕೋಟ ಹಾಗೂ ದಿವಂಗತ.ಬಿ.ಎಸ್.ಪಾಟೀಲ (ಸಾಸನೂರ) ಫೌಂಡೇಶನ್ ಇವರ ಸಹಯೋಗದಲ್ಲಿ ಹಮ್ಮಿಕೊಂಡ ಆರೋಗ್ಯ ತಪಾಸಣಾ ಮಹಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಡಾ.ಬಸವರಾಜ ಅಸ್ಕಿ ಅವರು ಮಾತನಾಡಿ ಕೊಣ್ಣೂರ ಗ್ರಾಮದ ಅಸ್ಕಿ ಮನೆತನದ ಗುರು ಹಿರಿಯರು ಒಳ್ಳೆಯ ಸಂಸ್ಕಾರಗಳನ್ನು ಕೊಟ್ಟಿರುವುದರಿಂದ ಅವರ ಕುಟುಂಬದ ಸದಸ್ಯರು ಸಮಾಜ ಸೇವೆಗೆ ತಮ್ಮನ್ನು ಅರ್ಪಿಸಿಕೊಂಡಿದ್ದಾರೆ.

ಬಾಗಲಕೋಟೆಯಲ್ಲಿರುವ ಅಸ್ಕಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಉತ್ತರ ಕರ್ನಾಟಕದ ಹೆಮ್ಮೆಯ ಆಸ್ಪತ್ರೆಯಾಗಿದೆ. ಕಡಿಮೆ ವೆಚ್ಚದಲ್ಲಿ ಬಡವರ ಅನುಕೂಲಕ್ಕಾಗಿ ಗುಣಮಟ್ಟದ ಆರೋಗ್ಯ ಸೇವೆಯನ್ನು ಇಲ್ಲಿ ನೀಡಲಾಗುತ್ತದೆ ಆಸ್ಪತ್ರೆಯಲ್ಲಿ ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳ ಸೌಲಭ್ಯವು ಇವೆ.



ಇಂತಹ ಶಿಬಿರುಗಳನ್ನು ನಡೆಸಿ ಉಚಿತ ಔಷಧಿಗಳನ್ನು ಹಾಗೂ ಹೆಚ್ಚಿನ ಶಸ್ತ್ರ ಚಿಕಿತ್ಸೆಗಾಗಿ ಆಯ್ಕೆ ಮಾಡಲಾಗುತ್ತಿದೆ ಇದರ ಸದುಪಯೋಗವನ್ನು ಮಾಡಿಕೊಳ್ಳಬೇಕು ಎಂದರು.ಡಾ.ಆರ್.ಸಿ.ನಾಗಾಂವಿ,ಡಾ. ಗುರುಪ್ರಸಾದ ಶಿವಶಿಂಪಿ,ಸಿ.ಬಿ.ಅಸ್ಕಿ,ಜಿಪಂ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ ಮಾತನಾಡಿ ಅಸ್ಕಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ದೇಶಕ ವಿಜಯ ಅಸ್ಕಿ ಅವರ ಸೇವೆಯನ್ನು ಶ್ಲಾಘಿಸಿದರು.

ಇದೇ ಸಂದರ್ಭದಲ್ಲಿ ಅಸ್ಕಿ ಫೌಂಡೇಶನ್ ಕೊಣ್ಣೂರದ ವತಿಯಿಂದ ನಿರ್ದೇಶಕ ವಿಜಯ ಅಸ್ಕಿ ಅವರನ್ನು ಗೌರವಿಸಲಾಯಿತು. ಪೂಜ್ಯ ಶ್ರೀನಾಥ-



-ಯ್ಯ ಹಿರೇಮಠ ನೇತೃತ್ವ ವಹಿಸಿದ್ದರು. ಶ್ರೀ ಖಾಸ್ಗತೇಶ್ವರ ಮಠದ ಪೂಜ್ಯ ಸಿದ್ದಲಿಂಗ ದೇವರು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಈ ಶಿಬಿರದಲ್ಲಿ ವಿಶೇಷವಾಗಿ ಹೃದಯ ರೋಗ, ಮೂತ್ರಪಿಂಡ ಸಮಸ್ಯೆ, ಸ್ತ್ರೀರೋಗ ಮತ್ತು ಪ್ರಸೂತಿ, ಚಿಕ್ಕ ಮಕ್ಕಳ ಚಿಕಿತ್ಸೆ, ಎಲುಬು ಮತ್ತು ಕೀಲು, ಮೂಗು ಕಿವಿ ಮತ್ತು ಗಂಟಲು ಚಿಕಿತ್ಸೆ, ಸಕ್ಕರೆ ಕಾಯಿಲೆ ಬಿಪಿ ಥೈರಾಯ್ಡ್ ಹೀಗೆ ಹಲವಾರು ರೋಗಗಳಿಗೆ ಸಂಬಂಧಿಸಿದ ಸುಮಾರು 607 ಜನರ ತಪಾಸಣೆ ನಡೆಸಿ ಅಗತ್ಯ ಔಷಧಿಗಳನ್ನು ಉಚಿತವಾಗಿ ವಿತರಿಸಲಾಯಿತು ಮತ್ತು 18 ಜನರನ್ನು ಹೆಚ್ಚಿನ ಚಿಕಿತ್ಸೆಗೆ ಆಯ್ಕೆ ಮಾಡಲಾಯಿತು.

ಈ ಸಮಯದಲ್ಲಿ ಗಣ್ಯರಾದ ಬಸನಗೌಡ ಹಡಲಗೇರಿ, ಪ್ರಭುಗೌಡ ಮದರ್ಕಲ್, ಎಚ್‌ಎಸ್ ಪಾಟೀಲ, ಅರವಿಂದ ಹೂಗಾರ, ಶಂಕರಗೌಡ ಹಿಪ್ಪರಗಿ,ಸಿ.ಸಿ.ಪಾಟೀಲ,ಡಾ. ಶ್ರೀಶೈಲ ಹುಕ್ಕೇರಿ,ಡಾ.ಪ್ರೀತಿ ವಿಜಯ, ಡಾ.ಅನೂಪ, ಶಂಕರಗೌಡ ಅಸ್ಕಿ,ಡಾ.ನಿಂಗರಾಜ, ಬಿ.ಎನ್.ಹಿಪ್ಪರಗಿ,ಎಸ್.ಎಂ.ಸಜ್ಜನ, ಪಿಎಸ್‌ಐ ಜ್ಯೋತಿ ಖೋತ್,ಜಿ.ಜಿ.ಅಸ್ಕಿ, ನಿಂಗನಗೌಡ ಪಾಟೀಲ, ಮಹೇಶ ಜೋಶಿ ಡಿ.ಕೆ.ಪಾಟೀಲ, ಮಲ್ಲು ಅಸ್ಕಿ ಬಿ.ವೈ.ಬಂಟನೂರ ಹಾಗೂ ಅಸ್ಕಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ವೈದ್ಯರು, ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಕಂಪ್ಯೂಟರ್ ಸೈನ್ಸ್ ಎಂಜಿನಿಯರಿಂಗ್

ಕಂಪ್ಯೂಟರ್ ಸೈನ್ಸ್ ಎಂಜಿನಿಯರಿಂಗ್ (CSE) 4 ವರ್ಷಗಳ ಪದವಿ ಕೋರ್ಸ್ ಆಗಿದ್ದು, ಕಂಪ್ಯೂಟರ್ ಸಿಸ್ಟಮ್‌ಗಳು, ಸಾಫ್ಟ್‌ವೇರ್ ಅಭಿವೃದ್ಧಿ, ಪ್ರೋಗ್ರಾಮಿಂಗ್ ಭಾಷೆಗಳು (C, Java, Python), ಮತ್ತು ನೆಟ್‌ವರ್ಕಿಂಗ್‌ಗೆ ಸಂಬಂಧಿಸಿದ ತಾಂತ್ರಿಕ ಜ್ಞಾನವನ್ನು ನೀಡುತ್ತದೆ. ಇದು ಏಅಇಖಿ, ಎಇಇ ಒಚಿಟಿ ಗಳಂತಹ ಪ್ರವೇಶ ಪರೀಕ್ಷೆಗಳ ಮೂಲಕ ಪ್ರವೇಶ ಪಡೆಯಬಹುದಾದ ಅತಿ ಬೇಡಿಕೆಯ ಕೋರ್ಸ್ ಆಗಿದೆ. ಕಂಪ್ಯೂಟರ್ ಸೈನ್ಸ್ ಎಂಜಿನಿಯ- ರಿಂಗ್ (CSE) ಕೋರ್ಸ್ ವಿವರಗಳು: ಕೋರ್ಸ್ ಅವಧಿ: 4 ವರ್ಷಗಳು (8 ಸೆಮಿಸ್ಟರ್‌ಗಳು).ಸಿಎಂಆರ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಬೆಂಗಳೂರು ಕಂಪ್ಯೂಟರ್ ವಿಜ್ಞಾನಕ್ಕಾಗಿ ಬೆಂಗಳೂರಿನ ಅತ್ಯುತ್ತಮ ಎಂಜಿನಿಯರಿಂಗ್ ಕಾಲೇಜುಗಳು ಬಿಇ । ಕಂಪ್ಯೂಟರ್ ಸೈನ್ಸ್ ಎಂಜಿನಿಯರಿಂಗ್ ಬೆಂಗಳೂ- ರಿನಲ್ಲಿರುವ ಒಂದು ಉನ್ನತ CSE ಕಾಲೇಜು, ಗುಣಮಟ್ಟದ ತಾಂತ್ರಿಕ ಶಿಕ್ಷಣ ಮತ್ತು 100% ಉದ್ಯೋಗಾವಕಾಶವನ್ನು ನೀಡುತ್ತದೆ. ಈಗಲೇ ಅನ್ವಯಿಸಿ ಕೋರ್ಸ್ ಅವಲೋಕನ। ಅರ್ಹತಾ ಮಾನದಂಡಗಳು। ಕೋರ್ಸ್ ರಚನೆ। ಮಾಹಿತಿ ಮತ್ತು ಡೌನ್‌ಲೋಡ್‌ಗಳು ಕೋರ್ಸ್ ಅವಲೋಕನ ಕಂಪ್ಯೂಟ- ರ್ ಸೈನ್ಸ್ ಎಂಜಿನಿಯರಿಂಗ್ ಎಂದರೇನು? ಕಂಪ್ಯೂಟ- ರ್ ಸೈನ್ಸ್ ಎಂಜಿನಿಯರಿಂಗ್ (CSE) ಎಂಜಿನಿಯರಿಂಗ್‌ನಲ್ಲಿ ಅತ್ಯಂತ ಬೇಡಿಕೆಯ ಕೋರ್ಸ್‌ಗಳಲ್ಲಿ ಒಂದಾಗಿದೆ. ಅಖಇ ಕ್ಷೇತ್ರವು ಕಂಪ್ಯೂಟರ್ ಎಂಜಿನಿಯರಿಂಗ್ ಮತ್ತು ಕಂಪ್ಯೂಟರ್ ವಿಜ್ಞಾನವನ್ನು ಸಂಯೋಜಿಸುತ್ತದೆ. ಬೆಂಗಳೂರಿನ ಃಇ ಕಂಪ್ಯೂಟ- ರ್ ಸೈನ್ಸ್ ಕಾಲೇಜುಗಳು ಕಂಪ್ಯೂಟರ್ ಪ್ರೋಗ್ರಾಮಿಂಗ್ ಮತ್ತು ನೆಟ್‌ವರ್ಕಿಂಗ್‌ನ ಮೂಲಭೂತ ಅಂಶಗಳನ್ನು ಕಲಿಸುತ್ತವೆ ಮತ್ತು ಹಲವಾರು ಕೋರ್ಸ್ ವಿಷಯಗಳನ್ನು ಒಳಗೊಂಡಿರುತ್ತವೆ. ಅವರು ಪ್ರೋಗ್ರಾಮಿಂಗ್ ಭಾಷೆಗಳು, ಪ್ರೋಗ್ರಾಂ ವಿನ್ಯಾಸ, ಕಂಪ್ಯೂಟೇಶನ್, ಅಲ್ಗಾರಿದಮ್‌ಗಳ ವಿನ್ಯಾಸ ಮತ್ತು ಅಭಿವೃದ್ಧಿ, ಕಂಪ್ಯೂಟರ್ ಸಾಫ್ಟ್‌ವೇರ್ ಮತ್ತು ಹಾರ್ಡ್‌ವೇರ್ ಅನ್ನು ಅಧ್ಯಯನ ಮಾಡುತ್ತಾರೆ. ಕಂಪ್ಯೂಟರ್ ಸೈನ್ಸ್ ಎಂಜಿನಿಯರ್‌ಗಳು ಕಂಪ್ಯೂಟಿಂಗ್‌ನ ಹಲವು ಅಂಶಗಳಲ್ಲಿ ತೊಡಗಿಸಿಕೊಂಡಿದ್ದಾರೆ, ವೈಯಕ್ತಿಕ ಮೈಕ್ರೋಪ್ರೊಸೆಸರ್‌ಗಳು, ಪರ್ಸನಲ್ ಕಂಪ್ಯೂಟ- ರ್‌ಗಳು ಮತ್ತು ಸೂಪರ್‌ಕಂಪ್ಯೂಟರ್‌ಗಳ ವಿನ್ಯಾಸದಿಂದ ಹಿಡಿದು ಸರ್ಕ್ಯೂಟ್ ವಿನ್ಯಾಸ ಮತ್ತು ಅವುಗಳನ್ನು ಬಲಪಡಿಸುವ ಸಾಫ್ಟ್‌ವೇರ್ ಬರೆಯುವವರೆಗೆ. ಈ 21ನೇ ಶತಮಾನದಲ್ಲಿ ಕೃತಕ ಬುದ್ಧಿಮತ್ತೆ , ಯಂತ್ರ ಕಲಿಕೆ, ಬಿಗ್ ಡೇಟಾ, ಇಂಟರ್ನೆಟ್ ಆಫ್ ಥಿಂಗ್ಸ್, ಕ್ವಾಂಟಮ್ ಕಂಪ್ಯೂಟಿಂಗ್ ಮತ್ತು ಬ್ಲಾಕ್‌ಚೈನ್‌ಗಳು ಮತ್ತು ಕಂಪ್ಯೂಟರ್ ಸೈನ್ಸ್ ಎಂಜಿನಿಯರ್‌ಗಳಂತಹ ಅತ್ಯಂತ ಪ್ರವರ್ಧಮಾನಕ್ಕೆ ಬರುತ್ತಿರುವ ಕ್ಷೇತ್ರಗಳು ಇಂದಿನ ಅಗತ್ಯವಾಗಿದೆ. ಕಂಪ್ಯೂಟರ್ ವಿಜ್ಞಾನದ ಮೂಲಕ ಉದ್ಯಮದಲ್ಲಿ ಉದ್ಯಮ 4.0 ಕ್ರಾಂತಿಯಾಗಲಿದೆ. ಅರ್ಹತೆ (Eligibility): ಪಿಯುಸಿ (PUC/10+2) ನಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಗಣಿತ (PCM) ವಿಷಯಗಳೊಂದಿಗೆ ಕನಿಷ್ಠ 45–50% ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಪ್ರಮುಖ ವಿಷಯಗಳು (Subjects): ಪ್ರೋಗ್ರಾಮಿಂಗ್ (Programming in C++, Java, Python). ಡೇಟಾ ಸ್ಟ್ರಕ್ಚರ್ಸ್ ಮತ್ತು ಅಲ್ಗಾರಿದಮ್ಸ್ (Data Structures & Algorithms). ಆಪರೇಟಿಂಗ್ ಸಿಸ್ಟಮ್‌ಗಳು (Operating Systems). ಡೇಟಾಬೇಸ್ ಮ್ಯಾನೇಜ್‌ಮೆಂಟ್ (DBMS). ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ (AI & Machine Learning). ಕೆಲಸದ ಅವಕಾಶಗಳು (Job Roles): ಸಾಫ್ಟ್‌ವೇರ್ ಡೆವಲಪರ್, ಸಿಸ್ಟಮ್ ಅನಾಲಿಸ್ಟ್, ವೆಬ್ ಡೆವಲಪರ್, ಡೇಟಾ ಸೈಂಟಿಸ್ಟ್, ಸೈಬರ್ ಸೆಕ್ಯು- ರಿಟಿ ಸ್ಪೆಷಲಿಸ್ಟ್. ಉದ್ಯೋಗ ನೀಡುವ ಪ್ರಮುಖ ಕಂಪನಿಗಳು ಭವಿಷ್ಯದ ವ್ಯಾಪ್ತಿ (Future Scope): ಐಟಿ ಕ್ಷೇತ್ರದಲ್ಲಿ ಹೆಚ್ಚಿನ ಬೇಡಿಕೆ ಮತ್ತು ಹೆಚ್ಚಿನ ವೇತನ ಪ್ಯಾಕೇಜ್ (ಲಕ್ಷಗಳಲ್ಲಿ) ಲಭ್ಯವಿದೆ.

1ನೇ ಪುಟದಿಂದ....

ಮುಖ್ಯಮಂತ್ರಿಯಗಿರುತ್ತಾರೆ ಎಂದು ಪದೇ ಪದೇ ಹೇಳುವ ಮೂಲಕ ಡಿ.ಕೆ.ಶಿವಕುಮಾರ್ ಅವರ ಅಸಹನೆಗೆ ಕಾರಣವಾಗಿದ್ದರು. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಅಲ್ಪಸಂಖ್ಯಾತರಿಗೆ ಟಿಕೆಟ್ ನೀಡಬೇಕೆಂದು ಶ್ಯಾಮನೂರು ಶಿವಶಂಕರಪ್ಪ ಅವರ ನಿಧನದ ಬಳಿಕ ಜಮೀರ್ ಬಲವಾಗಿ ಪ್ರತಿಪಾದಿಸುತ್ತಿದ್ದರು. ಆದರೆ ತೆರವಾಗಿರುವ ಎರಡು ಕ್ಷೇತ್ರಗಳಲ್ಲಿ ಬಾಗಲಕೋಟೆ ಅಭ್ಯರ್ಥಿಯ ಆಯ್ಕೆ ಜವಾಬ್ದಾರಿಯನ್ನು ಸಿದ್ದರಾಮಯ್ಯ ಅವರಿಗೆ ಬಿಟ್ಟುಕೊಡಲಾಗಿತ್ತು. ದಾವಣಗೆರೆ ದಕ್ಷಿಣ ಕ್ಷೇತ್ರಕ್ಕೆ ಡಿ.ಕೆ.ಶಿವಕುಮಾರ್ ಜವಬ್ದಾರಿ ವಹಿಸಿಕೊಂಡಿದ್ದರು. ಪಕ್ಷದ ನಿಷ್ಠಾವಂತ ನಾಯಕರಾಗಿದ್ದ ಶ್ಯಾಮನೂರು ಶಿವಶಂಕರಪ್ಪ ಅವರ ಕುಟುಂಬಕ್ಕೆ ಮಣೆ ಹಾಕಿದ್ದಾರೆ. ಈ ಮೂಲಕ ಅಲ್ಪಸಂಖ್ಯಾತ ನಾಯಕರ ತಂಡ ಕಟ್ಟಿಕೊಂಡು ತಿರುಗಾಡುತ್ತಿದ್ದ ಜಮೀರ್ ಅವರಿಗೆ ಮತ್ತೊಮ್ಮೆ ಚೆಕ್‌ಮೇಟ್ ಇಟ್ಟಿದ್ದಾರೆ. ಅಲ್ಪಸಂಖ್ಯಾತರಿಗೆ ಟಿಕೆಟ್ ನೀಡದೇ ಇದ್ದರೆ ಕಾಂಗ್ರೆಸ್‌ಗೆ ಮುಸ್ಲಿಮರ ವೋಟ್‌ಗಳು ಬರುವುದಿಲ್ಲ. ಎರಡು ಕ್ಷೇತ್ರದಲ್ಲೂ ಕಾಂಗ್ರೆಸ್ ಸೋಲಲಿದೆ ಎಂದು ಜಮೀರ್ ಎಚ್ಚರಿಸಿದ್ದರು. ಅದು ಸಾಲದು ಎಂಬಂತೆ ಖುದ್ದು ರಾಜೀನಾಮೆ ಬೆದರಿಕೆ ಹಾಕಿದ್ದರು. ಆದರೆ ಕಾಂಗ್ರೆಸ್ ಹೈಕಮಾಂಡ್ ಡಿ.ಕೆ.ಶಿವಕುಮಾರ್ ಅವರ ಪ್ರಭಾವದಿಂದ ಅದ್ಯಾವುದಕ್ಕೂ ತಲೆ ಕೆಡಿಸಿಕೊಂಡಂತೆ ಕಂಡು ಬರುತ್ತಿಲ್ಲ. ಕೊನೆಗೆ ಸಮರ್ಥ್‌ಗೆ ಮಲ್ಲಿಕಾರ್ಜುನ್‌ಗೆ ಟಿಕೆಟ್ ನೀಡಿದೆ. ಅತ್ತ ಬಾಗಲಕೋಟೆಯಲ್ಲಿ ಎಚ್.ವೈ.ಮೇಟಿಯವರ ಅವರ ಪುತ್ರ ಉಮೇಶ್ ಮೇಟಿಗೆ ಟಿಕೆಟ್ ನೀಡಲಾಗಿದೆ.

# ಜಾಗತಿಕ ತಾಪಮಾನ ತಡೆಗೆ ಮತ್ತು ಉತ್ತಮ ಆರೋಗ್ಯಕ್ಕೆ ಸಿರಿಧಾನ್ಯವೇ ಮದ್ದು: ಡಾ. ಖಾದರ್ ವಲಿ

**ನೈಜ್ಯ ದೆಸೆ ನ್ಯೂಸ್**

**ಜಾಗತಿಕ ತಾಪಮಾನವನ್ನು ಕಡಿಮೆ ಮಾಡಲು, ಮನುಕುಲದ ಆರೋಗ್ಯ ಸುಧಾರಿಸಲು ಹಾಗೂ ಸಂತಾನಶಕ್ತಿ ಹೆಚ್ಚಿಸಲು ಸಿರಿಧಾನ್ಯಗಳ ಬಳಕೆಯೊಂದೇ ಶಾಶ್ವತ ಪರಿಹಾರ," ಎಂದು ಖ್ಯಾತ ಆಹಾರ ತಜ್ಞ ಡಾ. ಖಾದರ್ ವಲಿ ಪ್ರತಿಪಾದಿಸಿದರು.**

ಜೈನ್ ಇಂಟರ್‌ನ್ಯಾಷನಲ್ ಟ್ರೇಡ್ ಆರ್ಗನೈಸೇಷನ್ (ಜೀತೊ) ಹೊಸಪೇಟೆ ಘಟಕದ ವತಿಯಿಂದ ಭಾನುವಾರ ಆಯೋಜಿಸಲಾಗಿದ್ದ 'ಸಿರಿಧಾನ್ಯದೊಂದಿಗೆ ಸ್ಮಾರ್ಟ್ ಪೌಷ್ಟಿಕಾಂಶ' ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ಮಾಂಸಾಹಾರ ಸೇವನೆಯು ಜಾಗತಿಕ ತಾಪಮಾನ ಏರಿಕೆಗೆ ಪ್ರಮುಖ ಕಾರಣವಾಗಿದೆ. ಒಂದು ಕೆ.ಜಿ. ಮಾಂಸಕ್ಕಾಗಿ ಸುಮಾರು 8 ಎಕರೆ ಅರಣ್ಯ ನಾಶವಾಗುತ್ತಿದೆ. ಸಿರಿಧಾನ್ಯ




ಬೆಳೆಯುವುದು ಮತ್ತು ಸೇವಿಸುವುದು ಪರಿಸರಕ್ಕೆ ಪೂರಕವಾದ 'ಅಹಿಂಸಾ ವಿಧಾನ'ವಾಗಿದೆ.

ಅಕ್ಕಿ, ಗೋಧಿ, ಮಾಂಸಾಹಾರ ಮತ್ತು ಹಾಲಿನ ಸೇವನೆಯನ್ನು ಕಡಿಮೆ ಮಾಡುವುದು ಮನುಕುಲದ ಹಿತದೃಷ್ಟಿಯಿಂದ ಅತ್ಯಗತ್ಯ. ಪ್ಲಾಸ್ಟಿಕ್ ಬಾಟಲಿ ನೀರು ಹಾಗೂ ಪ್ಯಾಕೇಜ್ಡ್ ಆಹಾರಗಳಿಂದ ದೂರವಿರಬೇಕು.ಪ್ರಸ್ತುತ ಆಸ್ಪತ್ರೆಗಳು ಕಾಯಿಲೆಗಳನ್ನು ಗುಣಪಡಿಸುವ ಬದಲು ಕೇವಲ ನಿರ್ವಹಣೆ ಮಾಡುತ್ತಿವೆ. ಮಧುಮೇಹದಂತಹ ಕಾಯಿಲೆಗಳು ಇಂದು ಬಿಲಿಯನ್ ಡಾಲರ್ ವ್ಯವಹಾರವಾಗಿ ಮಾರ್ಪಟ್ಟಿವೆ. ಆದರೆ, ಸಿರಿಧಾನ್ಯಗಳ ಬಳಕೆಯಿಂದ ಮಧುಮೇಹದಂತಹ ದೀರ್ಘಕಾಲೀನ ರೋಗಗಳನ್ನು ಸಂಪೂರ್ಣವಾಗಿ ಗುಣಪಡಿಸಲು ಸಾಧ್ಯವಿದೆ.

ನಮ್ಮ ಅಡುಗೆ ಮನೆಯಲ್ಲಿರುವ ನೈಸರ್ಗಿಕ ಪದಾರ್ಥಗಳೇ ನಿಜವಾದ ಆರೋಗ್ಯ ವರ್ಧಕಗಳು. ರಾಸಾಯನಿಕಯುಕ್ತ ಆಹಾರಗಳ ಬದಲಿಗೆ ಇವುಗಳ ಬಳಕೆಗೆ ಹೆಚ್ಚಿನ ಗಮನ ನೀಡಬೇಕು. ಕಾರ್ಯಕ್ರಮದ ಆರಂಭದಲ್ಲಿ ಜೀತೊ ಟ್ರಸ್ಟ್ ಅಧ್ಯಕ್ಷ ಹಿತೇಶ್ ಬಗ್ರೇಚಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಟ್ರಸ್ಟಿ ಮನೋಜ್ ಕುಮಾರ್ ಜೈನ್ ಸಿರಿಧಾನ್ಯಗಳ ಮಹತ್ವವನ್ನು ವಿವರಿಸಿದರು. ಪ್ರಿಯದರ್ಶಿನಿ ಹೋಟೆಲ್ ಸಮೂಹದ ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸ ರಾವ್ ಮಾತನಾಡಿ, ಪ್ರಸ್ತುತ ಜಾಗತಿಕ ಯುದ್ಧದ ಸನ್ನಿವೇಶದಲ್ಲಿ ಇಂಧನ ಉಳಿತಾಯ ಮಾಡುವ ಮೂಲಕ ದೇಶಕ್ಕೆ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು. ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಿರಿಧಾನ್ಯಗಳ ಆರೋಗ್ಯಕರ ಬಳಕೆಯ ಕುರಿತು ಮಾಹಿತಿ ಪಡೆದರು.

# ಅಳಿವಿನಂಚಿನಲ್ಲಿರುವ ಗುಬ್ಬಚ್ಚಿಗಳ ಸಂರಕ್ಷಣೆಗೆ ಸಂಕಲ್ಪ ಅಗತ್ಯ



**ನೈಜ್ಯ ದೆಸೆ ನ್ಯೂಸ್**

**"ನಗರೀಕರಣದ ಅಬ್ಬರದಲ್ಲಿ ಕಣ್ಮರೆಯಾಗುತ್ತಿರುವ ಗುಬ್ಬಚ್ಚಿಗಳನ್ನು ಉಳಿಸಲು ಪ್ರತಿಯೊಬ್ಬ ನಾಗ- ರಿಕರು ಸಂಕಲ್ಪ ಮಾಡಬೇಕು," ಎಂದು ಪೀಪಲ್ಸ್ ಫಾರ್ ಅನಿಮಲ್ಸ್ (PFA) ಸಂಸ್ಥೆಯ ವ್ಯವಸ್ಥಾಪಕ ಟ್ರಸ್ಟಿ ಸವಿತಾ ನಾಗಭೂಷಣ್ ತಿಳಿಸಿದರು.**

ವಿಶ್ವ ಗುಬ್ಬಚ್ಚಿ ದಿನದ ಅಂಗವಾಗಿ ಶುಕ್ರವಾರ ನಗರದ ಬೋಗಾದಿಯಲ್ಲಿರುವ ಪೀಪಲ್ಸ್ ಫಾರ್ ಅನಿಮಲ್ಸ್ ಆವರಣದಲ್ಲಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮ ಹಾಗೂ ಪಕ್ಷಿ ಗೂಡು ಮತ್ತು ನೀರಿನ ಬಟ್ಟಲು ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು. ನಗರ ಪ್ರದೇಶಗಳಲ್ಲಿ ಗುಬ್ಬಚ್ಚಿಗಳಿಗೆ ಪೂರಕವಾದ ವಾತಾವರಣ ಇಲ್ಲದಿರುವುದರಿಂದ ಅವು ಕಾಣೆಯಾಗುತ್ತಿವೆ. ಮತ್ತೆ ಅವುಗಳನ್ನು ನಗರಕ್ಕೆ ಆಕರ್ಷಿಸಲು ಸಾರ್ವಜನಿಕರು ಶ್ರಮಿಸಬೇಕು ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಹಿರಿಯ ಪ್ರಾಣಿಕ್ ಹೀಲಿಂಗ್ ಟ್ರೈನರ್ ಬಿ. ವೈಭವ್ ಮಾತನಾಡಿ, "ಹಿಂದಿನ ಕಾಲದಲ್ಲಿ ಮನೆಯ ಛಾವಣಿಗಳಲ್ಲಿ ಗುಬ್ಬಚ್ಚಿಗಳು ಗೂಡು ಮಾಡುತ್ತಿದ್ದವು. ಇಂದು ಅಂತಹ ಸ್ಥಳಾವಕಾಶ ಇಲ್ಲದಿರುವುದರಿಂದ ಕೃತಕ ಗೂಡುಗಳನ್ನು ಅಳವಡಿಸಿ, ಆಹಾರ ಮತ್ತು ನೀರು ಒದಗಿಸುವ ಮೂಲಕ ಮುಂದಿನ ಪೀಳಿಗೆಗೆ ಗುಬ್ಬಚ್ಚಿಗಳನ್ನು ಪರಿಚಯಿಸಬೇಕಿದೆ," ಎಂದರು. ಮನೆಯಲ್ಲಿ ಸಾಕು ಪ್ರಾಣಿಗಳಿದ್ದರೆ ಖಿನ್ನತೆಯಂತಹ ಮಾನಸಿಕ ಕಾಯಿಲೆಗಳು ದೂರವಾಗುತ್ತವೆ. ಪ್ರಾಣಿಗಳೊಂದಿಗಿನ ಒಡನಾಟವು ಮನೆಯಲ್ಲಿ ನಗು ಮತ್ತು ಸಂತೋಷದ ವಾತಾವರಣ ಮೂಡಿಸುತ್ತದೆ," ಎಂದು ವೈಭವ್ ಸಲಹೆ ನೀಡಿದರು.

ಜೈನ್ ಜೀವ್ ದಯಾ ಚಾರಿಟಿ ವತಿಯಿಂದ ಪಕ್ಷಿ ಪ್ರಿಯರಿಗೆ ಈ ಕೆಳಗಿನ ವಸ್ತುಗಳನ್ನು ಉಚಿತವಾಗಿ ವಿತರಿಸಲಾಯಿತು: ಮಣ್ಣಿನಿಂದ ತಯಾರಿಸಿದ ಗುಬ್ಬಚ್ಚಿ ಗೂಡುಗಳು. ಆಹಾರ ನೀಡಲು ಸ್ಟ್ಯಾಂಡ್ ಮಾದರಿಯ ಕಂಟೇನರ್‌ಗಳು. ನೀರು ಕುಡಿಯಲು ಮಣ್ಣು ಮತ್ತು ಸಿಮೆಂಟ್‌ನಿಂದ ತಯಾರಿಸಿದ ಬಟ್ಟಲುಗಳು. ಕಾರ್ಯಕ್ರಮದಲ್ಲಿ ಜೈನ್ ಜೀವ್ ದಯಾ ಚಾ- ರಿಟಿಯ ಕೋಕಿಲ ರಮೇಶ್ ಜೈನ್ ಹಾಗೂ ಇತರ ಗಣ್ಯರು ಮತ್ತು ಪಕ್ಷಿ ಪ್ರೇಮಿಗಳು ಉಪಸ್ಥಿತರಿದ್ದರು.

# ಆರೋಗ್ಯಕ್ಕೆ ಕ್ರೀಡೆ ಮತ್ತು ದೈಹಿಕ ವ್ಯಾಯಾಮ ಅತ್ಯಗತ್ಯ

**ನೈಜ್ಯ ದೆಸೆ ನ್ಯೂಸ್**

**ಮನುಷ್ಯನ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಕ್ರೀಡೆಗಳು ಬಹಳ ಪೂರಕವಾಗಿದ್ದು, ಪ್ರತಿಯೊಬ್ಬರೂ ದಿನದ ಕೆಲ ಸಮಯವನ್ನು ಕ್ರೀಡೆ ಅಥವಾ ವ್ಯಾಯಾಮಕ್ಕಾಗಿ ಮೀಸಲಿಡುವುದು ಇಂದಿನ ಒತ್ತಡದ ಬದುಕಿನಲ್ಲಿ ಅತ್ಯಗತ್ಯ ಎಂದು ನಗರಸಭೆ ಆಯುಕ್ತ ಬಿ.ಸಿ.ಬಸವರಾಜ್ ಅವರು ತಿಳಿಸಿದರು.ನಗರದ ಎಐಟಿ ಕಾಲೇಜು ಆವರಣದಲ್ಲಿ ಭಾನುವಾರ ಆಯೋಜಿಸಲಾಗಿದ್ದ 'ಫ್ರೆಂಡ್ಸ್ ಕ್ರಿಕೆಟ್ ಕಪ್–2026' ಟೂರ್ನಿಗೆ ಚಾಲನೆ ನೀಡಿ ಅವರು ಮಾತನಾಡಿದರು.**

ಕೆಲಸದ ಒತ್ತಡದ ನಡುವೆ ಕೇವಲ ಉದ್ಯೋಗಕ್ಕೆ ಜೀವನ ಸೀಮಿತಗೊಳಿಸಿದರೆ ಆರೋಗ್ಯದ ಮೇಲೆ ದುಷ್ಪರಿಣಾಮ



ಬೀರಲಿದೆ. ಹೀಗಾಗಿ ವ್ಯಾಯಾಮವನ್ನು ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ಆಯುಕ್ತರು ಕರೆ ನೀಡಿದರು.ಇಂದಿನ ಯುವಜನತೆ ರಜಾ ದಿನಗಳಲ್ಲಿ ಮದ್ಯಪಾನ, ಧೂಮಪಾನದಂತಹ ಕೆಟ್ಟ ಚಟಗಳಿಗೆ ಬಲಿಯಾಗುತ್ತಿರುವುದು ವಿಷಾದನೀಯ. ಇವುಗಳ ಬದಲಾಗಿ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದು ಭವಿಷ್ಯದ ದೃಷ್ಟಿಯಿಂದ ಉತ್ತಮ ಎಂದು ಅವರು ಎಚ್ಚರಿಸಿದರು.

ನಗರಸಭೆ ಸದಸ್ಯ ಶಾದಮ್ ಆಲಂಖಾನ್ ಮಾತನಾಡಿ, ಭಾರತದಲ್ಲಿ ಕ್ರಿಕೆಟ್ ಮನೆಮಾತಾಗಿರುವ ಕ್ರೀಡೆ. ಯುವಜನತೆ ತಮಗಿಷ್ಟವಾದ ಕ್ರೀಡಾ ಕ್ಷೇತ್ರದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸಾಧನೆ ಮಾಡಬೇಕು ಎಂದರು.ಪೌರ ನೌಕರರ ಸಂಘದ ಅಧ್ಯಕ್ಷ ಅಣ್ಣಯ್ಯ ಮಾತನಾಡಿ, ಈ ಬಾರಿಯ ಟೂರ್ನಿಯಲ್ಲಿ ಒಟ್ಟು ನಾಲ್ಕು ತಂಡಗಳು ಭಾಗವಹಿಸುತ್ತಿವೆ:ಗೇಮ್ ಚೇಂಜರ್ ಡಾಮಿನೇಟರ್ ರಾಯಲ್ ವಾರಿಯರ್ಸ್ ಟೀಂ ಕಮಾಂಡೊ ,ಟೂರ್ನಿಯಲ್ಲಿ ಒಟ್ಟು 9 ಪಂದ್ಯಗಳು ನಡೆಯಲಿದ್ದು, ಪೌರ ನೌಕರರ ಮಕ್ಕಳು ಉತ್ಸಾಹದಿಂದ ಭಾಗವಹಿಸುತ್ತಿದ್ದಾರೆ ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡ ನವೀನ್ ಹಾಗೂ ಪೌರ ನೌಕರರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಕೌಶಲ ವೃದ್ಧಿಸಿಕೊಂಡು ಲಭ್ಯ ಅವಕಾಶ ಬಳಸಿಕೊಳ್ಳಿ :ಪ್ರಾಂಶುಪಾಲ ರಾಧಾಕೃಷ್ಣ ಶೆಟ್ಟಿ ಕರೆ



**ನೈಜ್ಯ ದೆಸೆ ನ್ಯೂಸ್**

**"ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೇವಲ ಪದವಿ ಪ್ರಮಾಣಪತ್ರ ಮುಖ್ಯವಲ್ಲ, ಬದಲಾಗಿ ವಿದ್ಯಾರ್ಥಿಗಳು ತಮ್ಮಲ್ಲಿರುವ ಕೌಶಲಗಳನ್ನು (Skills) ನಿರಂತರವಾಗಿ ಅಭಿವೃದ್ಧಿಪಡಿಸಿಕೊಳ್ಳಬೇಕು.**

ಲಭ್ಯವಿರುವ ಉದ್ಯೋಗಾವಕಾಶಗಳನ್ನು ಸರಿಯಾದ ಸಮಯದಲ್ಲಿ ಸದುಪಯೋಗಪಡಿಸಿಕೊಂಡಾಗ ಮಾತ್ರ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ," ಎಂದು ಮಹಾವೀರ ಕಾಲೇಜಿನ ಪ್ರಾಂಶುಪಾಲರಾದ ರಾಧಾಕೃಷ್ಣ ಶೆಟ್ಟಿ ಅವರು ಹೇಳಿದರು. ಇಲ್ಲಿನ ಮಹಾವೀರ ಕಾಲೇಜಿನ ಪ್ಲೇಸ್‌ಮೆಂಟ್ ಸೆಲ್ ವತಿಯಿಂದ ಅಂತಿಮ ವರ್ಷದ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ *'ಬೃಹತ್ ಉದ್ಯೋಗ ಮೇಳ'*ವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಮುಂದುವರಿದು ಮಾತನಾಡಿದ ಅವರು, "ವಿದ್ಯಾರ್ಥಿಗಳು ಕಲಿಕೆಯ ಅವಧಿಯಲ್ಲೇ ಉದ್ಯೋಗ ಮಾರುಕಟ್ಟೆಯ ಬೇಡಿಕೆಗಳನ್ನು ಅರಿತುಕೊಳ್ಳಬೇಕು. ಕಂಪನಿಗಳು ನಿರೀಕ್ಷಿಸುವ ವೃತ್ತಿಪರತೆ ಮತ್ತು ಸಂವಹನ ಕಲೆಗಳನ್ನು ಮೈಗೂಡಿಸಿಕೊಂಡರೆ ಉದ್ಯೋಗ ಪಡೆಯುವುದು ಸುಲಭವಾಗುತ್ತದೆ," ಎಂದರು.

ಉದ್ಯೋಗ ಮೇಳದಲ್ಲಿ ಪಾಲ್ಗೊಂಡಿದ್ದ ವಿವಿಧ ಪ್ರತಿಷ್ಠಿತ ಕಂಪನಿಗಳ ಪ್ರತಿನಿಧಿಗಳು ಅಭ್ಯರ್ಥಿಗಳಿಗೆ ಉದ್ಯೋಗ ಆಯ್ಕೆ ಪ್ರಕ್ರಿಯೆಯ ಬಗ್ಗೆ ಸಮಗ್ರ ಮಾಹಿತಿ ನೀಡಿದರು. ಮೇಳದ ಭಾಗವಾಗಿ ವಿದ್ಯಾರ್ಥಿಗಳಿಗೆ ಈ ಕೆಳಗಿನ ಹಂತಗಳಲ್ಲಿ ಪರೀಕ್ಷೆ ನಡೆಸಲಾಯಿತು: ಅಭ್ಯರ್ಥಿಗಳ ತಾರ್ಕಿಕ ಮತ್ತು ವಿಷಯ ಜ್ಞಾನದ ಮೌಲ್ಯಮಾಪನ. ಸಂವಹನ ಮತ್ತು ನಾಯಕತ್ವ ಗುಣಗಳ ಪರೀಕ್ಷೆ. ಅಭ್ಯರ್ಥಿಗಳ ಆತ್ಮವಿಶ್ವಾಸ ಮತ್ತು ವೃತ್ತಿಪರತೆಯ ಪರಿಶೀಲನೆ. ಕಾರ್ಯಕ್ರಮದಲ್ಲಿ ಕಾಲೇಜಿನ ಪ್ಲೇಸ್‌ಮೆಂಟ್ ಸಂಯೋಜಕಿ ಸವಿತಾ ಕೋಟ್ಯಾನ್ ಅವರು ಉಪಸ್ಥಿತರಿದ್ದು, ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ವಿವಿಧ ವಿಭಾಗಗಳ ಮುಖ್ಯಸ್ಥರು ಹಾಗೂ ಬೋಧಕೇತರ ಸಿಬ್ಬಂದಿಗಳು ಸಹಕರಿಸಿದರು. ಪ್ರತಿಷ್ಠಾ ಜೈನ್ ಅವರು ಕಾರ್ಯಕ್ರಮಕ್ಕೆ ಆಗಮಿಸಿದವರನ್ನು ಸ್ವಾಗತಿಸಿ, ವಂದಿಸಿದರು. ಮೇಳದಲ್ಲಿ ಅಂತಿಮ ವರ್ಷದ ಸುಮಾರು 200ಕ್ಕೂ ಅಧಿಕ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ವಿವಿಧ ಕಂಪನಿಗಳಲ್ಲಿ ಉದ್ಯೋಗದ ಅವಕಾಶವನ್ನು ಪಡೆದುಕೊಂಡರು.

# ಅಂಧ ಮಕ್ಕಳ ಬದುಕಿಗೆ ಬೆಳಕಾದ ಪಂ. ಪಂಚಾಕ್ಷರಿ ಗವಾಯಿಗಳ ಸೇವೆ ಅನನ್ಯ

**ನೈಜ್ಯ ದೆಸೆ ನ್ಯೂಸ್**

**ಹಿಂದೂಸ್ತಾನಿ ಸಂಗೀತ ಕ್ಷೇತ್ರಕ್ಕೆ ಪಂಡಿತ ಪಂಚಾಕ್ಷರಿ ಗವಾಯಿಗಳು ನೀಡಿರುವ ಕೊಡುಗೆ ಅಪಾರ. ಅವರು ಕೇವಲ ಸಂಗೀತಗಾರರಾಗಿರದೆ, ತಮ್ಮ ಇಡೀ ಬದುಕನ್ನು ಅಂಧ ಮಕ್ಕಳ ಏಳಿಗೆಗಾಗಿ ಮುಡಿಪಾಗಿಟ್ಟ ಮಹಾನ್ ಚೇತನ," ಎಂದು ಖ್ಯಾತ ಹಿಂದೂಸ್ತಾನಿ ಗಾಯಕ ಪಂಡಿತ ವೆಂಕಟೇಶ ಕುಮಾರ್ ಅವರು ಬಣ್ಣಿಸಿದರು.**

ನಗರದ ಆಲೂರು ವೆಂಕಟರಾವ್ ಭವನದಲ್ಲಿ ಭಾನುವಾರ, ಮಾನವಿ ವಿದ್ಯಾಧರೆ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಆಯೋಜಿಸಲಾಗಿದ್ದ ಪಂ. ಪಂಚಾಕ್ಷರಿ




ಗವಾಯಿಗಳ 135ನೇ ಜಯಂತ್ಯುತ್ಸವ, 'ಪಂ. ಪಂಚಾಕ್ಷರಿ ಗವಾಯಿ ರಾಷ್ಟ್ರೀಯ ಯುವ' ಪ್ರಶಸ್ತಿ ಪ್ರದಾನ ಹಾಗೂ 'ಪರಂಪರಾ' ಸಂಗೀತ ಉತ್ಸವದಲ್ಲಿ ಅವರು ಮಾತನಾಡುತ್ತಿದ್ದರು.

ಸಂಗೀತ ಎಂಬುದು ಕೇವಲ ಕಲೆಯಲ್ಲ, ಅದೊಂದು ಶಿಸ್ತುಬದ್ಧ ಜೀವನ ವಿಧಾನ. ಕಠಿಣ ಪರಿಶ್ರಮವಿಲ್ಲದೆ ಸಂಗೀತ ಸಿದ್ಧಿಸಲು ಸಾಧ್ಯವಿಲ್ಲ ಎಂದು ಪಂ. ವೆಂಕಟೇಶ ಕುಮಾರ್ ಕಿವಿಮಾತು ಹೇಳಿದರು.ಎಷ್ಟೇ ದೊಡ್ಡ ಮಟ್ಟದ ಸಾಧನೆ ಮಾಡಿದರೂ, ನಮಗೆ ದಾರಿ ತೋರಿಸಿದ ಗುರುಗಳನ್ನು ಯಾವತ್ತೂ ಮರೆಯಬಾರದು ಎಂದು ಅವರು ನೆನಪಿಸಿದರು.

ಇಂದಿನ ಯುವಕರು ಹಿಂದೂಸ್ತಾನಿ ಸಂಗೀತದ ಕಡೆಗೆ ಹೆಚ್ಚಿನ ಆಸಕ್ತಿ ತೋ- ರಿಸುತ್ತಿರುವುದು ಮತ್ತು ಶ್ರದ್ಧೆಯಿಂದ ಪರಂಪರೆಯನ್ನು ಉಳಿಸುತ್ತಿರುವುದು ಆಶಾದಾಯಕ ಬೆಳವಣಿಗೆ ಎಂದು ಹರ್ಷ ವ್ಯಕ್ತಪಡಿಸಿದರು.ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಮುರುಘಾಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಅವರು ಮಾತನಾಡಿ, "ಸಂಗೀತ ಸಾಧನೆಯು ಒಂದು ಕಠಿಣ ತಪಸ್ಸು. ಜೀವನ ಪರ್ಯಂತ ಸಾಧನೆ ಮಾಡಿದರೆ ಮಾತ್ರ ಇದನ್ನು ಒಲಿಸಿಕೊಳ್ಳಲು ಸಾಧ್ಯ. ಪಂಚಾಕ್ಷರಿ ಗವಾಯಿಗಳು ಸಂಗೀತದ ಮೂಲಕ ಸಮಾಜಕ್ಕೆ ಆದರ್ಶಪ್ರಾಯರಾಗಿದ್ದಾರೆ," ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಗಾಯಕರಾದ ವಿರೂಪಾಕ್ಷಯ್ಯ ವಂದಲಿ, ಶಾಂತಾರಾಮ ಹೆಗಡೆ, ಉದಯ ದೇಸಾಯಿ, ಬಸವರಾಜ ವಂದಲಿ, ರಾಘವ ಕಮ್ಮಾರ, ವಿಜಯಕುಮಾರ ಸುತ್ತಾರ ಸೇ- ರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.